ಸಂಪುಟ : 9 ಸಂಚಿಕೆ 167 ಪುಟ : 4 ಬೆಲೆ: 3.00 ಗುರುವಾರ ಆಗಸ್ಟ್ 8 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ







Volume : 9 Issue : 167 Pages : 4 Price : 3.00 Thursday August 8 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 8ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 16 ಡೂರಗಲ್ಲಿ, ಡಿಸಿ ಮಿಲ್ ರೋಡ್, ಭಜಂತ್ರಿ ಓಣಿ, ಬಸವೇಶ್ವರ ಗುಡಿ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 12 ಪಿ ಆಂಡ್ ಟಿ ಕ್ವಾರ್ಟರ್ಸ್, ಹನುಮಂತ ದೇವರ ಗುಡಿ ಲೈನ್, ಗಾರ್ಡನ್ ಲೈನ್, ರಿಂಗ್ ರೋಡ್ ಲೈನ್, ರಾಘವೇಂದ್ರ ಗುಡಿ ಲೈನ್, ಮಾಳಶೆಟ್ಟಿಯವರ ಲೈನ್, ಚರ್ಚ್ ಭಾಗಗಳು, ಗಣಪತಿ ಕಟ್ಟಿ ಉಳಿದ ಭಾಗಗಳು.

ವಾರ್ಡ್ ನಂ. 30, 34 ವಡ್ಡರ ಗೇರಿ, 46 ಪ್ಲಾಟ್, ಮೂರುಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ 1,2,3 ನೇ ಕ್ರಾಸ್, ಬಸವೇಶ್ವರ ಶಾಲೆಯ ಲೈನ್, ಶಿವಾನಂದ ಗಾರ್ಡನ್, ಸಚ್ಚಿದಾನಂದ ಮಠ, ಪಾಠಶಾಲೆ, ಮುಳಗುಂದ ಲೈನ, ಹುಣಸಿಮರದ ಶಾಲೆಯ ಲೈನ್, ಮಸೀದಿ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 32 ಕಿಲ್ಲಾ, ಹಸಿರುಕೆರೆ, ದಿಬ್ಬದ ಲೈನ್, ರಂಗನವಾಡ, ಸುಣಗಾರ ಓಣಿ, ದುರ್ಗಮ್ಮನ ಗುಡಿ ಲೈನ್, ಜೋಡ ಮಾರುತಿ ಗುಡಿ ಲೈನ್, ಹಳೇ ಕಚೇರಿ ರಸ್ತೆ, ಝುಂಡಾ ಕಟ್ಟಿ, ಗುಜ್ಜರ ಬಸ್ತಿ, ಕೋಳಿಕೇರಿ ಮೂಲಿ, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 22 ಗಂಗಿಮಡಿ ಕನ್ನಡ ಶಾಲೆ, ಅಪಾರ್ಟ್‌ಮೆಂಟ್, ವಾರ್ಡ್ ನಂ. 7 ಪುಲಿಕೇಶಿ ರೋಡ್, ಬಾಗಲಕೋಟಿಯವರ ಲೈನ್, ಪೋಸ್ಟ್ ಆಫೀಸ್ ಲೈನ್, ಪಟ್ಟಣಶೆಟ್ಟಿಯವರ ಲೈನ್, ಗ್ವಾಡಿಯವರ ಲೈನ್, ವಾಲ್ಮೀಕಿ ನಗರ, ಹುಚ್ಚನಗೌಡ್ರ ಓಣಿಯ ಉಳಿದ ಭಾಗಗಳು. ವಾರ್ಡ್ ನಂ. 29 ಪಂಚಾಕ್ಷರಿ ನಗರ 3, 5 ನೇ ಕ್ರಾಸ್.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ತಾಲೂಕು ಮಟ್ಟದ 'ಬಿ' ಗ್ರೂಪ್ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ ಉದ್ಘಾಟಿಸಿದ ಸಚಿವ ಡಾ. ಎಚ್.ಕೆ. ಪಾಟೀಲ**

# ಕ್ರೀಡಾ ಸಾಧನೆಗೆ ಪೂರಕ ಸೌಕರ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಕ್ರೀಡಾಭ್ಯಾಸ ಮಾಡಲು ಎಲ್ಲ ರೀತಿಯ ಸೌಲಭ್ಯಗಳನ್ನು ಸರ್ಕಾರ ಒದಗಿಸಿದೆ. ಅವುಗಳನ್ನು ಸದ್ಬಳಕೆ ಮಾಡಿಕೊಂಡು ಕ್ರೀಡಾ ಸಾಧನೆ ಮಾಡಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಗದಗ ತಾಲೂಕು ಮಟ್ಟದ 'ಬಿ' ಗ್ರೂಪ್ ಪದವಿಪೂರ್ವ ಕಾಲೇಜುಗಳ ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

ಒಲಿಂಪಿಕ್ಸ್‌ನಲ್ಲಿ ಈಗಾಗಲೇ ದೇಶದ ಕ್ರೀಡಾಪಟುಗಳು ಉತ್ತಮ ಪ್ರದರ್ಶನ ತೋರಿ ಸಾಧನೆಗೈಯುತ್ತಿದ್ದಾರೆ. ಮನು ಬಾಕರ್, ಸರ್ವೋಜಿತ್ ಸಿಂಗ್, ಸ್ವನಿತ್ ಕುಸಲೆ ಅವರುಗಳು ಶೂಟಿಂಗ್‌ನಲ್ಲಿ ಪ್ರಾಂಜ್ ಮೆಡಲ್ ಪಡೆದಿದ್ದಾರೆ. ನೀರಜ್ ಚೋಪ್ರಾ ಅವರು ಫೈನಲ್ ತಲುಪಿದ್ದು, ಅವರು ವಿಜಯಶಾಲಿಯಾಗಲಿ ಎಂದು ಶುಭಕೋರಿದರಲ್ಲದೆ, ಕುಸ್ತಿಯಲ್ಲಿ ನಿತೇಶ್ ಪೋಗಾಡ್, ಹಾಕಿ ತಂಡವು ಮೂರನೇ ಸ್ಥಾನಕ್ಕೆ ಸೆಣಸಾಟ ನಡೆಸಿದೆ. ಇವರೆಲ್ಲರೂ



ವಿಜಯಿಗಳಾಗಲಿ ಎಂದರು.

ಜಿಲ್ಲೆಯಲ್ಲಿರುವ ಈಜುಕೊಳಗಳು ಕಳೆದ ಬೇಸಿಗೆಯಲ್ಲಿ ಮಕ್ಕಳು ಸೇರಿದಂತೆ ಎಲ್ಲರ ಬೆಸಿಗೆ ಜಳವನ್ನು ತಣಿಸಿವೆ. ಇವುಗಳಿಂದ 70 ಸಾವಿರ ರೂ ಮೊತ್ತ ಸಂಗ್ರಹವಾಗಿದೆ. ಮೂಲಭೂತ ಸೌಕರ್ಯಗಳನ್ನು ನಾವು ನೀಡಲು ಬದ್ಧರಾಗಿದ್ದು, ಅವುಗಳ ಸದ್ಬಳಕೆಯ ಜವಾಬ್ದಾರಿ ನಿಮ್ಮದು ಎಂದು ಹೇಳಿದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಕ್ರೀಡಾ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಪದವಿಪೂರ್ವ ವಿದ್ಯಾರ್ಥಿಗಳಿಗೆ ಓದಿನಲ್ಲಿ ಇರುವ ಆಸಕ್ತಿ ಕ್ರೀಡೆಯಲ್ಲಿ ಕಾಣುತ್ತಿಲ್ಲ. ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಗಳಿಗೂ ಆಸಕ್ತಿ ನೀಡುವ ಮೂಲಕ ದೈಹಿಕ, ಮಾನಸಿಕ ನೆಮ್ಮದಿ ನಿಮ್ಮದಾಗಿಸಿಕೊಳ್ಳಿ ಎಂದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಕ್ರೀಡಾಕೂಟದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ್ ಬಬರ್ಜಿ, ಗದಗ-ಬೆಟಗೇರಿ ನಗರಸಭೆಯ ಮಾಜಿ ಅಧ್ಯಕ್ಷ ಬಿ.ಬಿ. ಅಸೂಟಿ, ರಾಜೇಶ್ ಕುಲಕರ್ಣಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು ಸೇರಿದಂತೆ ಗದಗ ತಾಲೂಕು ಮಟ್ಟದ 'ಬಿ' ಗ್ರೂಪ್ ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿಗಳು ಹಾಜರಿದ್ದರು.

> ಮಕ್ಕಳು ಕ್ರೀಡಾ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು, ಕ್ರೀಡಾಸ್ಪರ್ಧೆಯಿಂದ ಸಾಧನೆಯ ಶಿಖರ ತಲುಪಬೇಕು. ಜಿಲ್ಲೆಯಲ್ಲಿ ಕ್ರೀಡಾ ಅಭ್ಯಾಸಕ್ಕಾಗಿ ಹಾಕಿ ಕ್ರೀಡಾಂಗಣ, ಈಜು ಕೊಳ, ಸುಸಜ್ಜಿತ ಕ್ರೀಡಾಂಗಣದಂತಹ ಸೌಕರ್ಯ ಒದಗಿಸಿದೆ. ಜೊತೆಗೆ ಮಕ್ಕಳಿಗೆ ಉತ್ತಮ ತರಬೇತುದಾರರನ್ನು ನೀಡಿ, ಸರ್ಕಾರ ಪ್ರೋತ್ಸಾಹಿಸುತ್ತಿದೆ. ಇವುಗಳನ್ನು ಮಕ್ಕಳು ಉಪಯೋಗಿಸಿಕೊಂಡು ಸಾಧನೆ ಮಾಡಲು ಮುಂದೆ ಬರಬೇಕು.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ವಿದ್ಯಾರ್ಥಿಗಳು ದೈಹಿಕ, ಮಾನಸಿಕ ಆರೋಗ್ಯದ ಕಡೆಗೆ ಗಮನ ಹರಿಸಿ, ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು. ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಸದುದ್ದೇಶದಿಂದ ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಖೇಲೊ ಇಂಡಿಯಾ ಕಾರ್ಯಕ್ರಮ ಜಾರಿಗೊಳಿಸಿದೆ. ಇದರಿಂದ ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ಸರಿಯಾದ ತರಬೇತಿ ನೀಡಿ, ಕ್ರೀಡಾ ಸಾಧನೆಗೆ ಕಾರಣವಾಗಿದೆ ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

**ಟೊಮೆಟೋ ಬೆಲೆ ದಿಢೀರ್ ಕುಸಿತ । ಕೂಲಿ, ಸಾಗಾಟದ ದರವೂ ಸಿಗದೆ ರೈತರ ಆಕ್ರೋಶ**

## ರಸ್ತೆ ಸೇರಿದ ಟೊಮೆಟೋ ಬೆಳೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ ಕೆಲವು ತಿಂಗಳಿಂದ 100 ರೂ ಗಡಿ ದಾಟಿದ್ದ ಟೊಮೇಟೋ ಬೆಲೆ ದಿಢೀರ್ ಪಾತಾಳಕ್ಕೆ ಕುಸಿದಿದ್ದರಿಂದ ಅಸಮಾಧಾನಗೊಂಡ ರೈತರು ಬುಧವಾರ ಪಟ್ಟಣದ ತರಕಾರಿ ಮಾರುಕಟ್ಟೆಯಲ್ಲಿ ಟೊಮೇಟೋ ಹಣ್ಣನ್ನು ರಸ್ತೆಗೆ ಎಸೆದು ನೋವನ್ನು ವ್ಯಕ್ತಪಡಿಸಿದರು.

ಮಾರುಕಟ್ಟೆಯಲ್ಲಿ ಟೊಮೇಟೋ ಬೆಲೆ ಹೆಚ್ಚಿರುವುದರಿಂದ ಅನೇಕ ರೈತರು ಸಾಕಷ್ಟು ಖರ್ಚು ಮಾಡಿ ಟೊಮೇಟೋ ಬೆಳೆದಿದ್ದರು. ಇದೀಗ ಮಾರುಕಟ್ಟೆಗೆ ಅಗತ್ಯಕ್ಕಿಂತ ಹೆಚ್ಚು ಟೊಮೇಟೋ ಬರುತ್ತಿದೆಯಲ್ಲದೇ, ಅತಿಯಾದ ಮಳೆ/ ತಂಪಾದ ವಾತಾವರಣದಿಂದ ಗುಣಮಟ್ಟವೂ ಕುಸಿದಿದೆ. ಹೀಗಾಗಿ, ಬೆಲೆ ಸಂಪೂರ್ಣ ಕುಸಿದಿದೆ. ಟೊಮೇಟೋ ದರ ಒಂದು ಬಾಕ್ಸ್‌ಗೆ ಬುಧವಾರದ ಸಗಟು ಧಾರಣೆ (20–25 ಕೆಜಿ) ದರ 50–60 ರೂ ಆಗಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿತ್ತು.

ಕಳೆದ ಎರಡು ವಾರಗಳಿಂದ ಏರುಪೇರು ಆಗುತ್ತಿದ ಪ್ರತಿ 25 ಕೆ.ಜಿ ಟೊಮೇಟೋ ಬೆಲೆ 100 ರಿಂದ 150 ರೂ.ವರೆಗೆ ಇತ್ತು. ಆದರೆ ಬುಧವಾರ ಏಕಾಏಕಿ ಕುಸಿತ ಕಂಡಿದ್ದರಿಂದ ರೈತರು ತಮ್ಮ ಅಸಮಾಧಾನಗೊಂಡುಎಲ್ಲಾ ಹಣ್ಣುಗಳನ್ನು ಬಿದಿಗೆ ಚೆಲ್ಲಿ ಆಕ್ರೋಶ ಹೊರಹಾಕಿದರು. ಕೆಲ ರೈತರು ಜನರನ್ನು ಕರೆದು ಉಚಿತವಾಗಿ ಟೊಮೇಟೋ ಹಂಚಿದರು.

ವರದಾ/ತುಂಗಭದ್ರಾ ನದಿ ಪಾತ್ರದ ಗ್ರಾಮಗಳ ರೈತರು ಹೆಚ್ಚಿನ ಪ್ರಮಾಣದಲ್ಲಿ ಟೊಮೇಟೋ ಬೆಳೆದಿದ್ದಾರೆ. ಹಣ್ಣು ಮಾರುಕಟ್ಟೆಗೆ ತರಲು ಆಳಿನ ಪಗಾರ, ಸಾಗಾಟದ ಖರ್ಚು–ವೆಚ್ಚವೂ ಸಿಗದ್ದರಿಂದ ರೊಚ್ಚಿಗೆದ್ದ ರೈತ ವೀರಣ್ಣ ಬಣಗಾರ ಟೊಮೇಟೊ ಹಣ್ಣನ್ನು ನೆಲಕ್ಕೆ ಸುರವಿ ತನ್ನ ಆಕ್ರೋಶವನ್ನು ವ್ಯಕ್ತಪಡಿಸಿದರು.

> ಈ ಕುರಿತು ವ್ಯಾಪಾರಸ್ಥ ಮಂಜುನಾಥ ಹೊಗೆಸೊಪ್ಪಿನ ಪ್ರತಿಕ್ರಿಯಿಸಿ, ಕಳೆದ ಮೂರ್ನಾಲ್ಕು ದಿನಗಳಿಂದ ಪಟ್ಟಣದ ಮಾರುಕಟ್ಟೆಗೆ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದ ಟೊಮೇಟೋ ಬರುತ್ತಿದೆ. ಎಲ್ಲವನ್ನು ಖರೀದಿಸಿ ಮಾರಾಟ ಮಾಡುವಷ್ಟು ದೊಡ್ಡ ಪ್ರಮಾಣದ ಮಾರುಕಟ್ಟೆ ವ್ಯವಸ್ಥೆ ಇಲ್ಲಿಲ್ಲ ಮತ್ತು ಎಲ್ಲ ಕಡೆಯೂ ಹಣ್ಣಿನ ಬೆಲೆ ಕಡಿಮೆಯಾಗಿದೆ. ರೈತರ ಕಷ್ಟ–ನಷ್ಟದ ಪರಿಸ್ಥಿತಿ ನಮಗೂ ಬೇಸರ ತರಿಸುತ್ತದೆ.ಆದರೆ ಕೆಲವೊಮ್ಮೆ ಹೀಗಾಗುತ್ತದೆ ಎಂದರು.



**ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರಿಗೆ ಮೊಬೈಲ್ ಮತ್ತು ಸಮವಸ್ತ್ರ ವಿತರಣೆ**

# ಅಂಗನವಾಡಿ ಕಾರ್ಯಕರ್ತೆಯರ ಶ್ರಮ ಅಪಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಗಳನ್ನು ಅನುಷ್ಠಾನಗೊಳಿಸಿ, ಯಶಸ್ವಿಯಾಗಿಸುವಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಪಾತ್ರ ಅಪಾರವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಗದಗ ತಾಲೂಕಿನ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ಮೊಬೈಲ್ ಮತ್ತು ಸಮವಸ್ತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ಮಾಹಿತಿ ಸಂಗ್ರಹಿಸುವಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಅಪಾರ ಶ್ರಮ ವಹಿಸುತ್ತಾರೆ. ಅವರ ಸಂಪೂರ್ಣ ಸಹಭಾಗಿತ್ವದೊಂದಿಗೆ ಯೋಜನೆಗಳು ಅನುಷ್ಠಾನಗೊಂಡು ಯಶಸ್ವಿಯಾಗುತ್ತದೆ. ಈ ಹಿನ್ನೆಲೆಯಲ್ಲಿ ಅಂಗನವಾಡಿ ಸಹಾಯಕರು



ಹಾಗೂ ಕಾರ್ಯಕರ್ತರಿಗೆ ಸರ್ಕಾರದಿಂದ ಉಚಿತವಾಗಿ ಮೊಬೈಲ್ ಹಾಗೂ ಸಮವಸ್ತ್ರ ವಿತರಣೆ ಮಾಡಲಾಗುತ್ತಿದೆ ಎಂದರು.

ಇಂದು ವಿತರಿಸಲಾದ ಮೊಬೈಲ್‌ಗಳನ್ನು ಸುಸ್ಥಿತಿಯಲ್ಲಿಟ್ಟುಕೊಂಡು ಸರ್ಕಾರದ ಯೋಜನೆಗಳ ಸಾಕಾರಕ್ಕೆ ಅಂಗನವಾಡಿ ಕಾರ್ಯಕತೆಯರು ಶ್ರಮಿಸಬೇಕು. ಶಿಕ್ಷಣ, ಆರೋಗ್ಯ ಸಮೀಕ್ಷೆ ಹಾಗೂ ಸುಧಾರಣೆಯಲ್ಲಿ ನಿಮ್ಮ ಶ್ರಮ ಮರೆಯಲಾಗದು. ನಿಮ್ಮಿಂದಾಗಿ ಸರ್ಕಾರದ ಕೆಲಸ–ಕಾರ್ಯಗಳು ಇನ್ನಷ್ಟು ಚುರುಕುಗೊಳ್ಳುವ ಮೂಲಕ ನಿಗದಿತ ಅವಧಿಯೊಳಗೆ ಅರ್ಹರಿಗೆ ತಲುಪುವಂತಾಗಲಿ ಎಂದು ಹೇಳಿದರು.

> ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆಯಲ್ಲಿ ಅಂಗನವಾಡಿ ಕಾರ್ಯಕರ್ತರು ಶ್ರಮ ವಹಿಸಿ ಕಾರ್ಯ ನಿರ್ವಹಿಸಬೇಕು. ಸರ್ಕಾರದಿಂದ ನೀಡಿದ ಮೊಬೈಲ್‌ನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಸರ್ಕಾರಕ್ಕೂ ಉತ್ತಮ ಹೆಸರು ತರಬೇಕೆಂದು ಸಚಿವರಾದ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕಿಯರಿಗೆ ಸಾಂಕೇತಿಕವಾಗಿ ಮೊಬೈಲ್ ಹಾಗೂ ಸಮವಸ್ತ್ರವನ್ನು ಸಚಿವರು ವಿತರಿಸಿದರು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಇಲಾಖೆಯ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕರು ಉಪಸ್ಥಿತರಿದ್ದರು.

**ಒಲಿಂಪಿಕ್ಸ್ ಕುಸ್ತಿ ಫೈನಲ್ ಸ್ಪರ್ಧೆಗೆ ವಿನೇಶಾ ಪೋಗಟ್ ಅನರ್ಹಗೊಳಿಸಿರುವುದು ಅನ್ಯಾಯ**

## ಕಾನೂನು ಪುನರ್ ವಿಮರ್ಶೆಯ ಅಗತ್ಯವಿದೆ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಅಂತಾರಾಷ್ಟ್ರೀಯ ಕುಸ್ತಿ ಪಟು ವಿನೇಶಾ ಪೋಗಟ್ ಅವರಿಗೆ ಒಲಿಪಿಂಕ್ಸ್ ಕುಸ್ತಿ ಫೈನಲ್ ಪಂದ್ಯದ ಮೊದಲು ಅವರ ತೂಕ ಕೇವಲ 100 ಗ್ರಾಂ ಹೆಚ್ಚಳವಾಗಿದೆ ಎಂದು ಅವರನ್ನು ಸ್ಪರ್ಧೆಯಿಂದ ಅನರ್ಹಗೊಳಿಸಿರುವುದು ದೊಡ್ಡ ಅನ್ಯಾಯ. ಒಲಿಂಪಿಕ್ಸ್ ಗೇಮ್‌ನ ಕಾನೂನು ಪುನರ್ ವಿಮರ್ಶೆ ಮಾಡುವುದು ಅಗತ್ಯವಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿಯವರು ಹೇಳಿದರು.

ಅಂತಾರಾಷ್ಟ್ರೀಯ ಕುಸ್ತಿ ಪಟು ವಿನೇಶಾ ಪೋಗಟ್ ಅವರಿಗೆ ಒಲಿಂಪಿಕ್ ಫೈನಲ್‌ನಲ್ಲಿ ಅವಕಾಶ ತಪ್ಪಿರುವ ಕುರಿತು ಬುಧವಾರ ನವದೆಹಲಿಯಲ್ಲಿ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಸಾಮಾನ್ಯವಾಗಿ ಯಾವುದಾದರೂ ಆಟದ ಆರಂಭದಲ್ಲಿ ತೂಕ ಮತ್ತು ಇತರ ಅರ್ಹತೆಗಳನ್ನು ನೋಡುತ್ತಾರೆ. ಆದರೆ, ಪ್ರತಿಯೊಂದು ರೌಂಡ್‌ನಲ್ಲಿಯೂ ತೂಕ ನೋಡುವುದು ಬೇರೆ ಯಾವುದೇ



ಆಟದಲ್ಲಿಲ್ಲ. ಈ ಒಲಿಂಪಿಕ್ಸ್‌ನಲ್ಲಿ ತೂಕ ನೋಡಿರುವುದು ಪ್ರಶ್ನಾರ್ಹವಾಗಿದೆ. ಪ್ರತಿದಿನ ವ್ಯಕ್ತಿಯ ತೂಕದಲ್ಲಿ ನೂರರಿಂದ ಮುನ್ನೂರು ಗ್ರಾಂ ವ್ಯತ್ಯಾಸವಾಗುತ್ತಿರುತ್ತದೆ. ಅವರ ತೂಕದಲ್ಲಿ ನೂರು ಗ್ರಾಂ ಹೆಚ್ಚಾಗಿದೆ ಎಂದು ಸ್ಪರ್ಧೆಯಿಂದ ಅಮಾನತು ಮಾಡುವುದು ಸಮಂಜಸ ಅಲ್ಲ. ಮೆಟಾಬೆಲಿಕ್ ಚಟುವಟಿಕೆಗಳು ಕಡಿಮೆ ಆದಾಗ ತೂಕ ಹೆಚ್ಚು-ಕಡಿಮೆ ಆಗುತ್ತದೆ. ಇದು ನೈಸರ್ಗಿಕ ಕ್ರಿಯೆ. ಹೀಗಾಗಿ ತೂಕ ಹೆಚ್ಚಳದ ಹಿನ್ನೆಲೆಯಲ್ಲಿ ಸ್ಪರ್ಧೆಗೆ ಅವಕಾಶ ನೀಡದಿರುವುದು ಬಹಳ ದೊಡ್ಡ ಅನ್ಯಾಯುವಾದಂತಾಗಿದ್ದು, ಇದನ್ನು ಪುನರ್ ಪರಿಶೀಲನೆ ಮಾಡುವುದು ಅಗತ್ಯ ಎಂದು ಅವರು ಆಗ್ರಹಿಸಿದರು. ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿಯೂ ಕೂಡ ಕೆಲವು ಸಾರಿ ರಾಜಕೀಯ ನಡೆಯುತ್ತದೆ. ಕೆಲವರನ್ನು ಹೊರಗಿಡುವ ತಂತ್ರಗಾರಿಕೆ ನಡೆಯುತ್ತದೆ.ದೀ ಬಗ್ಗೆ ಕೆಲವರಿಗೆ ಶಿಕ್ಷೆಯೂ ಆಗಿದೆ. ಈ ಪ್ರಕರಣವನ್ನು ಕೇಂದ್ರ ಕ್ರೀಡಾ ಸಚಿವರು ಗಂಭೀರವಾಗಿ ಪರಿಗಣಿಸಿ, ವಿನೇಶಾ ಪೋಗಟ್ ಅವರಿಗೆ ಅವಕಾಶ ದೊರಕುವಂತೆ ನೋಡಿಕೊಳ್ಳಬೇಕು. ಇದು ಎಲ್ಲ ಭಾರತೀಯರ ಭಾವನೆಯಾಗಿದೆ ಎಂದು ಹೇಳಿದರು.

> ಕಳೆದ ಬಾರಿಯೂ ವಿನೇಶಾ ಪೋಗಟ್ ಸ್ಪರ್ಧೆಯಿಂದ ದೂರ ಉಳಿಯುವಂತಾಗಿತ್ತು. ಈ ಬಾರಿಯಂತೂ ದೊಡ್ಡ ಅನ್ಯಾಯವಾಗಿದ್ದು, ಈ ಅನ್ಯಾಯವನ್ನು ಸರಿಪಡಿಸುವ ನಿಟ್ಟಿನಲ್ಲಿ ಎಲ್ಲ ರೀತಿಯ ಪ್ರಯತ್ನಗಳು ನಡೆಯಬೇಕು. ಒಲಿಂಪಿಕ್ಸ್‌ನಲ್ಲಿ ವಿನೇಶಾ ಪೋಗಟ್ ಚಿನ್ನದ ಪದಕ ತರುತ್ತಾರೆ ಎನ್ನುವ ವಿಶ್ವಾಸ ಎಲ್ಲರದ್ದಾಗಿದೆ ಎಂದು ಹೇಳಿದರು.

## ಸರಕಾರಿ ಶಾಲೆಯ ನೂತನ ಕೊಠಡಿ ಉದ್ಘಾಟನೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಸೊರಟೂರ ಗ್ರಾಮದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ ಸಹಯೋಗದಲ್ಲಿ ವಿವೇಕ ಯೋಜನೆಯಡಿ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯ ನೂತನ ಕೊಠಡಿಂಯುನ್ನುರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಮತ್ತು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಜಿ.ಎಸ್.ಪಾಟೀಲ್, ಮುಖಂಡರಾದ ವಾಸಣ್ಣ ಕುರಡಗಿ, ಟಿ ಈಶ್ವರ್, ಸಿದ್ದು ಪಾಟೀಲ್, ಎಸ್ ಡಿ ಎಂ ಸಿ ಅಧ್ಯಕ್ಷರಾದ ಸುಮಿತ್ರ ಹರಿಜನ, ಪ್ರಕಾಶ ಹೀರೆಮನಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಾಟಕಿ ,ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ ನಡುವಿನಮನಿ, ಮುಖೋಪಾಧ್ಯಾಯನಿ ವನಿತಾ ವರ್ಣೇಕರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

## ಸಂಪಾದಕೀಯ

# ಗಡ್ಕರಿ ಮಾತಿಗೂ ಇಲ್ಲ ಮಣೆ

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಆರೋಗ್ಯ ಮತ್ತು ಜೀವ ವಿಮೆ ಮೇಲೆ ವಿಧಿಸಿರುವ ತೆರಿಗೆಯನ್ನು ರದ್ದುಪಡಿಸಬೇಕು ಎನ್ನುವ ಕೂಗು ಬಲಗೊಳ್ಳುತ್ತಿದೆ. ಆರ್ಥಿಕ ಸಾಕ್ಷರತೆ ಹೊಂದಿದ ಮಧ್ಯಮ ವರ್ಗದ ಜನರೇ ಪಾವತಿಸುವಂಥ ಈ ವಿಮೆಗಳ ಮೇಲಿನ ತೆರಿಗೆ ರದ್ದುಪಡಿಸುವುದು ಮಧ್ಯಮ ವರ್ಗದವರಿಗೆ ಬಲ ನೀಡಲಿದೆ.

ಆದರೆ ನಿರ್ಮಲಾ ಸೀತಾರಾಮನ್ ಜೀವ ಮತ್ತು ಆರೋಗ್ಯ ವಿಮೆ ಮೇಲಿನ ತೆರಿಗೆ ಕಡಿತ ಕುರಿತು ಒಂದೇ ಒಂದು ಪ್ರತಿಕ್ರಿಯೆ ನೀಡಿಲ್ಲ. ಕೇಂದ್ರ ಸಚಿವ ನಿತಿನ್ ಗಡ್ಕರಿ ಸೇರಿದಂತೆ ಎನ್ ಡಿಎ ಮಿತ್ರಪಕ್ಷದ ಕೆಲ ಹಿರಿಯ ಮುಖಂಡರು ಪತ್ರ ಬರೆದರೂ ನಿರ್ಮಲಾ ಸೀತಾರಾಮನ್ ತೆರಿಗೆ ವಿಷಯದಲ್ಲಿ ಮೌನ ಮುರಿಯುತ್ತಿಲ್ಲ.

ವರ್ಷದಿಂದ ವರ್ಷಕ್ಕೆ ತೆರಿಗೆ ಭಾರ ಹೆಚ್ಚಿಸುತ್ತಲೆ ಸಾಗಿರುವ ನಿರ್ಮಲಾ ಸೀತಾರಾಮನ್ ಈ ಬಾರಿಯೂ ಅದನ್ನೆ ಮುಂದುವರಿಸಿದ್ದಾರೆ. ಜೀವ ವಿಮೆ ಮತ್ತು ಆರೋಗ್ಯ ವಿಮೆಯನ್ನು ಮಧ್ಯಮ ವರ್ಗದವರೇ ಖರೀದಿಸುತ್ತಾರೆ. ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಾ, ಒಂದಷ್ಟು ಹಣ ಉಳಿತಾಯ ಮಾಡಿ ಜೀವ ವಿಮೆ, ಆರೋಗ್ಯ ವಿಮೆ ಇನ್ನೊಂದಿಷ್ಟು ಷೇರು ಮಾರುಕಟ್ಟೆ, ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುತ್ತಾರೆ.

ಇಂಥ ಮಧ್ಯಮ ವರ್ಗದ ಮೇಲೆ ನಿರ್ಮಲಾ ಸೀತಾರಾಮನ್ ಗದಾಪ್ರಹಾರ ಮಾಡಿದ್ದಾರೆ. ವಿಮೆ ಮೇಲೆ 18 ಪ್ರತಿಶತ ತೆರಿಗೆ ವಿಧಿಸಿದ್ದಾರೆ. ಮಧ್ಯಮ ವರ್ಗದವರು ಜೀವ ವಿಮೆ ಖರೀದಿಸಲೇಬಾರದು, ಖಾಸಗಿ ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆ ಪಡೆಯಲೇಬಾರದು ಎನ್ನುವ ರೀತಿಯಲ್ಲಿ ವರ್ತಿಸುತ್ತಿದ್ದಾರೆ. ಇನ್ನು ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡುವವರಿಗೆ ಗರಿಷ್ಠ 20ಪ್ರತಿಶತ ತೆರಿಗೆ ವಿಧಿಸಿ ಮಧ್ಯಮ ವರ್ಗದವರನ್ನು ಬಡವರನ್ನಾಗಿ ಮಾಡುವ ಕೆಲಸಕ್ಕೆ ಮುಂದಾಗಿದ್ದಾರೆ.

ತೆರಿಗೆ ವಿಚಾರದಲ್ಲಿ ನಿರ್ಮಲಾ ಸೀತಾರಾಮನ್ ಅವರನ್ನು ಉಕ್ಕಿನ ಮಹಿಳೆ ಎನ್ನಬಹುದು. ಯಾರ ಮಾತಿಗೂ ಮನ್ನಣೆ ನೀಡದೆ ನಿರ್ಧಾರ ಕೈಗೊಳ್ಳುವಂಥ ಮಹಿಳೆ. ಆದರೆ ತಮ್ಮ ಈ ನಡೆಯನ್ನು ಕೆಳಮಧ್ಯಮ, ಮಧ್ಯಮ ಮತ್ತು ಬಡವರ ಕಲ್ಯಾಣಕ್ಕೆ ಬಳಕೆ ಮಾಡಬೇಕು. ಆರ್ಥಿಕ ಸಾಕ್ಷರತೆ ಹೆಚ್ಚುತ್ತಿರುವ ಈ ಕಾಲಘಟ್ಟದಲ್ಲಿ ಕೆಳ ಮಧ್ಯಮ ವರ್ಗವನ್ನು ಸದೃಢ ಮಧ್ಯಮ ವರ್ಗವಾಗಿ ಮಾಡಿ, ದೇಶವನ್ನು ಆರ್ಥಿಕವಾಗಿ ಸದೃಢತೆಗೆ ಕಾರಣವಾಗುವಂಥ ನಿರ್ಧಾರ ಕೈಗೊಳ್ಳಬೇಕು.

ದೇಶದಲ್ಲಿ ಶಿಕ್ಷಣ, ವಿಮೆ, ಆರೋಗ್ಯ ಸೇವೆ, ಹೂಡಿಕೆ ವಿಷಯದಲ್ಲಿ ವಿನಾಯಿತಿ ನೀಡಿದಾಗ ಮಾತ್ರ ಜನಸಾಮಾನ್ಯರು, ಮಧ್ಯಮ ವರ್ಗದವರ ಬದುಕಿನಲ್ಲಿ ಬದಲಾವಣೆ ಕಂಡುಕೊಳ್ಳಲು ಸಾಧ್ಯ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು.

### ನರೇಗಲ್ ಪ.ಪಂ. ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಸಾಮಾನ್ಯ ಮೀಸಲಾತಿ ಪ್ರಕಟ

# ಸಮರ್ಥ ಸಾರಥಿಯ ನಿರೀಕ್ಷೆಯಲ್ಲಿ ಜನತೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್**

ಅವಧಿ ಮುಗಿದು ಬಹಳೇ ದಿನಗಳ ನಂತರ ಸರಕಾರ ಪಟ್ಟಣ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ಪ್ರಕಟವಾಗಿದ್ದು, ಈ ಸಾರೆ ಅಧ್ಯಕ್ಷ, ಉಪಾಧ್ಯಕ್ಷ ಯಾರಾಗುತ್ತಾರೆ ಎಂಬ ಚರ್ಚೆ ಶುರುವಾಗಿದೆ.

ಪಟ್ಟಣದಲ್ಲಿ ಪಟ್ಟಣ ಪಂಚಾಯತಿ ಇದ್ದೂ ಇಲ್ಲದಂತಾಗಿತ್ತು. ಸಾರಥಿಯೇ ಇಲ್ಲದೆ ಅಭಿವೃದ್ಧಿಯಂತೂ ಶೂನ್ಯವಾಗಿತ್ತು. ಪಟ್ಟಣದಲ್ಲಿ ಮೂಲ ಸೌಕರ್ಯಗಳಿಗೆ ಸಾರ್ವಜನಿಕರು ಪರದಾಡುವಂತಾಗಿತ್ತು. ಪ.ಪಂ ಸದಸ್ಯರಿಗೆ ಅಧಿಕಾರ ಇದ್ದೂ ಇಲ್ಲದಂತಾಗಿತ್ತು. ಮೀಸಲಾತಿಯತ್ತ ಚಿತ್ತ ಹರಿಸಿ ಕಾಯ್ದು ಕುಳಿತಿದ್ದ ಸದಸ್ಯರಿಗೆ ಸರಕಾರದಿಂದ ಹೊರಟ ಆದೇಶ ಬರುತ್ತಲೇ ಅಧ್ಯಕ್ಷ-ಉಪಾಧ್ಯಕ್ಷ ಗದ್ದುಗೆ ಏರಲು ಹವಣಿಸುತ್ತಿದ್ದಾರೆ. ಮೊದಲ ಅವಧಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಅವಧಿಯು ಮೇ. 6ಕ್ಕೆ ಪೂರ್ಣಗೊಂಡಿದ್ದು, ಆಗಿನಿಂದಲೂ ಆಡಳಿತಾಧಿಕಾರಿಯಾಗಿ ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಕಾರ್ಯನಿರ್ವಹಿಸುತ್ತಿದ್ದಾರೆ.




ನರೇಗಲ್ ಪಟ್ಟಣ ಪಂಚಾಯಿತಿಯಲ್ಲಿ ಒಟ್ಟು 17 ಸದಸ್ಯರಿದ್ದು, ಅದರಲ್ಲಿ 12 ಬಿಜೆಪಿ, 3 ಕಾಂಗ್ರೆಸ್ ಹಾಗೂ 2 ಪಕ್ಷೇತರ ಸದಸ್ಯರು ಚುನಾಯಿತರಾಗಿದ್ದಾರೆ. ರೋಣ ಮತಕ್ಷೇತ್ರದ ಶಾಸಕರು ಕಾಂಗ್ರೆಸ್‌ನವರು, ಹಾವೇರಿ ಲೋಕಸಭಾ ಸಂಸದರು ಬಿಜೆಪಿಯವರು. ಇಬ್ಬರು ಪಕ್ಷೇತರ ಸದಸ್ಯರಲ್ಲಿ ಒಬ್ಬರು ಕಾಂಗ್ರೆಸ್, ಇನ್ನೊಬ್ಬರು ಬಿಜೆಪಿಯನ್ನು ಬೆಂಬಲಿಸಿದ್ದಾರೆ. ಹೀಗಾಗಿ, ಬಿಜೆಪಿಯು ಪಟ್ಟಣ ಪಂಚಾಯಿತಿ ಅಧಿಕಾರ ಗದ್ದುಗೆ ಏರುವುದು ಸ್ಪಷ್ಟವಾಗಿದೆ. ಬಿಜೆಪಿ ಸದಸ್ಯರ ಆಕಾಂಕ್ಷಿಗಳ ಚಿತ್ತ ಅಧ್ಯಕ್ಷ-ಉಪಾಧ್ಯಕ್ಷ ಹುದ್ದೆಯತ್ತ ನೆಟ್ಟಿದೆ.

ಮೊದಲ ಅವಧಿಗೆ ಎಸ್ಸಿ ಮಹಿಳಾ ಸ್ಥಾನಕ್ಕೆ ಮೀಸಲಾಗಿದ್ದ ಅಧ್ಯಕ್ಷ ಸ್ಥಾನವನ್ನು ಪ್ರಥಮ ಅವಧಿ (15 ತಿಂಗಳು) ಬಿಜೆಪಿಯ 16ನೇ ವಾರ್ಡ್‌ನ ಸದಸ್ಯೆ ಅಕ್ಕಮ್ಮ ಮಣ್ಣೊಡ್ಡರ ಹಾಗೂ ಸಾಮಾನ್ಯ ಉಪಾಧ್ಯಕ್ಷ ಸ್ಥಾನವನ್ನು 17ನೇ ವಾರ್ಡ್‌ನ ಕುಮಾರಸ್ವಾಮಿ ಕೋರಧಾನ್ಯಮಠ ಹಾಗೂ ಇನ್ನುಳಿದ 15 ತಿಂಗಳ ಅವಧಿಯನ್ನು 5ನೇ ವಾರ್ಡ್‌ನ ವಿಜಯಲಕ್ಷ್ಮೀ ಚಲವಾದಿ ಅಧ್ಯಕ್ಷೆಯಾಗಿ ಹಾಗೂ ಉಪಾಧ್ಯಕ್ಷರಾಗಿ ಸಾಮಾನ್ಯ ವರ್ಗದ 4ನೇ ವಾರ್ಡ್‌ನ ಶ್ರೀಶೈಲಪ್ಪ ಬಂಡಿಹಾಳ ಕಾರ್ಯ ನಿರ್ವಹಿಸಿದ್ದರು. ಇನ್ನುಳಿದ ಅವಧಿಗೆ ಮೀಸಲಾತಿ ಅಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಮೀಸಲಾತಿ ಬಂದಿದೆ.

> ನರೇಗಲ್ಲ ಪಟ್ಟಣ ಪಂಚಾಯಿತಿ ಅಧ್ಯಕ್ಷ-ಉಪಾಧ್ಯಕ್ಷರ 2ನೇ ಅವಧಿಯ ಮೀಸಲಾತಿ ಆದೇಶ ಪ್ರಕಟಿಸಿದೆ. ಸರ್ಕಾರದಿಂದ ಮೀಸಲಾತಿ ಪ್ರಕಟವಾದ ಹಿನ್ನೆಲೆಯಲ್ಲಿ ಚುಣಾವಣೆ ನಡೆಸಲಾಗುವುದು. ಸದಸ್ಯರು ಅಧಿಕಾರ ಸ್ವೀಕರಿಸಿದ ನಂತರ ಪಟ್ಟಣ ಅಭಿವೃದ್ಧಿಯ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.
>
> **– ಮಹೇಶ ನಿಡಶೇಶಿ.**
> **ಪ.ಪಂ ಮುಖ್ಯಾಧಿಕಾರಿ, ನರೇಗಲ್.ವವ**

## ಅಭಿವೃದ್ಧಿ ಹಿನ್ನಡೆ

ಕಳೆದ ಒಂದು ವರ್ಷದ ಹಿಂದೆ ಅಧ್ಯಕ್ಷ-ಉಪಾಧ್ಯಕ್ಷರ ಅವಧಿ ಮುಗಿದಿದೆ. ಅವಧಿ ಮುಗಿದರೂ ರಾಜ್ಯ ಸರ್ಕಾರ ಮೀಸಲಾತಿ ಪ್ರಕಟಿಸಿರಲಿಲ್ಲ. ಇದರಿಂದಾಗಿ ಪಟ್ಟಣದ ಅಭಿವೃದ್ಧಿಗೆ ಹಿನ್ನಡೆಯಾಗಿತ್ತು. ವಾರ್ಡ್‌ಗಳಲ್ಲಿನ ಹತ್ತು ಹಲವು ಸಮಸ್ಯೆಗಳೊಂದಿಗೆ ಬರುವ ಸಾರ್ವಜನಿಕರಿಗೆ ಉತ್ತರಿಸಲಾಗದ ಸ್ಥಿತಿ ಪಟ್ಟಣ ಪಂಚಾಯಿತಿಯಲ್ಲಿ ನಿರ್ಮಾಣವಾಗಿತ್ತು. ಆದರೆ ಸೋಮವಾರ ಮಿಸಲಾತಿ ಪ್ರಕಟವಾಗಿದ್ದರಿಂದ ಮತ್ತೆ ಸದಸ್ಯರು ಅಧಿಕಾರಕ್ಕೆ ಬಂದು ಪಟ್ಟಣ ಅಭಿವೃದ್ಧಿ ಮಾಡುತ್ತಾರೆ ಎಂಬ ಆಶಾಭಾವನೆ ಸಾರ್ವಜನಿಕರದ್ದಾಗಿದೆ.

# ಮುಕ್ತ ವಿಶ್ವವಿದ್ಯಾಲಯದ ಪ್ರವೇಶ ಆರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾಲಯವು ಪ್ರಸಕ್ತ 2024-25ನೇ ಜುಲೈ ಆವೃತ್ತಿಯ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಯ ಪ್ರಕ್ರಿಯೆ ಆರಂಭಿಸಿದ್ದು, ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ, ಬಿಕಾಂ, ಬಿ.ಲಿಟ್, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್ಸಿ , ಬಿ.ಎಸ್. ಡಬ್ಲ್ಯೂ , ಎಂ.ಎ, ಎಂ.ಎ - ಪತ್ರಿಕೋದ್ಯಮ , ಎಂ.ಕಾಂ, ಎಂ.ಬಿ.ಎ, ಎಂ.ಲಿಟ್, ಎಂ.ಎಸ್ಸಿ , ಎಂ.ಸಿ.ಎ, ಎಂ.ಎಸ್. ಡಬ್ಲ್ಯೂ ಹಾಗೂ ಡಿಪ್ಲೋಮಾ ಮತ್ತು ಪಿ.ಜಿ. ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಧಿಕೃತ ವೆಬ್ ಸೈಟ್ ತಿತಿತಿ.ಇಂಣಟಥಿಭೆಣಡಿಣ.ಚಿಛಿ.ಟಿ ಏಖಔಗ ಂಜಟ್ಖುಂಟಿ ಕಂಡಿಣಚಿಟ ಮೂಲಕ ಪ್ರವೇಶಾತಿಯ ಅರ್ಜಿ ಭರ್ತಿ ಮಾಡಿಸಿಕೊಂಡ ನಂತರ ಆನ್ ಲೈನ್ ಮುಖಾಂತರ ಪ್ರವೇಶಾತಿಯ ಶುಲ್ಕ ಪಾವತಿಸಿ ಪ್ರವೇಶಾತಿಯನ್ನು ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ ಬಿ.ಎನ್. ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಗದಗ ಪ್ರಾದೇಶಿಕ ಕೇಂದ್ರ, ಡಾ.ಪಂಡಿತ ಪುಟ್ಟರಾಜ್ ಕವಿ ಗವಾಯಿಗಳ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ಹತ್ತಿರ, ಎಲ್.ಎಲ್.ಕಟ್ಟಡ, ಜನರಲ್ ಕೆ.ಎಂ.ಕಾರ್ಯಪ್ಪ ವೃತ್ತ (ಹಳೆಯ ಡಿಸಿ ಕಚೇರಿ ವೃತ್ತ )ಗದಗ -582101 ಹಾಗೂ ಕಚೇರಿ ದೂರವಾಣಿ ಸಂಖ್ಯೆ 8884231002/ 8970555801/ 8618929376 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಓದು ಮಕ್ಕಳ ಜ್ಞಾನದ ತೊಟ್ಟಿಲು




**■ವಿಜಯಸಾಕ್ಷಿ ಸುದ್ದಿ, ಕುಕನೂರು**

ಇಂದಿನ ಯಾಂತ್ರಿಕ ದಿನಗಳಲ್ಲಿ ವಿದ್ಯಾರ್ಥಿಗಳ ಜೀವನ, ವ್ಯಕ್ತಿತ್ವ, ಉಜ್ವಲ ಭವಿಷ್ಯಕ್ಕೆ ಪುಸ್ತಕ ಹಾಗೂ ಪತ್ರಿಕೆಗಳ ಓದಿನ ಅಭಿರುಚಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹಿರಿಯ ಪತ್ರಕರ್ತ ರಮೇಶ ಸುರ್ವೆ ಅಭಿಪ್ರಾಯಪಟ್ಟರು.

ಕುಕನೂರಿನ ಕನ್ನಡ ಸಾಹಿತ್ಯ ಸಂಸ್ಕೃತಿ ಅಭಿವೃದ್ಧಿ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ತಾಲೂಕಿನ ಇಟಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಆಯೋಜಿಸಿದ್ದ ಪುಸ್ತಕ, ಪತ್ರಿಕೆ ಸಂಸ್ಕೃತಿ ಅಭಿಯಾನ ಹಾಗೂ ಮಕ್ಕಳ ಸಾಂಸ್ಕೃತಿಕ ಪ್ರತಿಭೋತ್ಸವ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗದ ಚಾರಿತ್ರಿಕ ಹಿನ್ನೆಲೆಯ ವಿದ್ಯಾರ್ಥಿಗಳು ಜ್ಞಾನ ವಿಕಾಸದ ಹಾದಿಯಲ್ಲಿ ಮುನ್ನಡೆಯಲು ಪ್ರತಿಯೊಬ್ಬರೂ ಓದುವ ವಾತಾವರಣ ಸೃಷ್ಟಿಸಿ ಉತ್ತಮ ಭವಿಷ್ಯ ಕಂಡುಕೊಳ್ಳಬೇಕು ಎಂದರಲ್ಲದೆ, ಓದುವ ಮೂಲಕ ಹೊಸ ಚರಿತ್ರೆಯನ್ನು ಬರೆದವರನ್ನೂ ಆಧಾರವಾಗಿಟ್ಟುಕೊಂಡು ಮುನ್ನೆಲೆಗೆ ಬರುವಂತೆ ಸಲಹೆ ನೀಡಿದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಲಿಂಗರಾಜ್ ಹೊಸಭಾವಿ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷೆ ನಿರ್ಮಲಾ ಮಹೇಶ್ ಹಿರೇಮನಿ, ಸಾಹಿತಿ ಬಿ.ಎಂ. ಹಳ್ಳಿ, ಶಿಕ್ಷಕ ನಾಗರಾಜ್ ಉಮಚಗಿ, ಕ.ಸಾ.ಪ ಅಧ್ಯಕ್ಷ ಕಳಕಪ್ಪ ಕುಂಬಾರ, ಮಲ್ಲಿಕಾರ್ಜುನಗೌಡ ಹಲ್ಯಾಳ ಉಪಸ್ಥಿತರಿದ್ದರು. ನಂತರ ಖ್ಯಾತ ಗಾಯಕ ಮೇಘರಾಜ ಜಿಡಗಿ ಹಾಗೂ ಸ್ಥಳೀಯ ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಇದೇ ಸಂದರ್ಭದಲ್ಲಿ ರಮೇಶ್ ಸುರ್ವೆ ಹಾಗೂ ಬಸವರಾಜ ಹಳ್ಳಿ ಶಾಲೆಗೆ ನೂರಾರು ಪುಸ್ತಕಗಳನ್ನು ಕೊಡುಗೆ ನೀಡಿದರು. ಶಿಕ್ಷಕ ವೀರಣ್ಣ ಕೊನಾರಿ ಸ್ವಾಗತಿಸಿದರು. ರುದ್ರಪ್ಪ ಭಂಡಾರಿ ಪ್ರಾಸ್ತಾವಿಕ ಮಾತನಾಡಿದರು, ಶಿಕ್ಷಕ ಮಾಲತೇಶ್ ನಿರೂಪಿಸಿದರು.

# ಕರ್ನಾಟಕ ಪಬ್ಲಿಕ್ ಶಾಲೆ ನೂತನ ಕಟ್ಟಡದ ಭೂಮಿ ಪೂಜೆ



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಸೊರಟೂರ ಗ್ರಾಮದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ ಸಹಯೋಗದಲ್ಲಿ 2023-24ನೇ ಸಾಲಿನ 8443 ಲೆಕ್ಕ ಶೀರ್ಷಿಕೆಯಡಿ ಅಂದಾಜು ರೂ1.69 ಕೋಟಿ ಅನುದಾನದಲ್ಲಿ ನಿರ್ಮಿಸುವ ಕರ್ನಾಟಕ ಪಬ್ಲಿಕ್ ಶಾಲೆಯ ನೂತನ ಕಟ್ಟಡದ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಮತ್ತು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ಜಿ.ಎಸ್.ಪಾಟೀಲ್, ಗಣ್ಯರಾದ ವಾಸಣ್ಣ ಕುರಡಗಿ, ಟಿ ಈಶ್ವರ್, ಸಿದ್ದು ಪಾಟೀಲ್, ಸೊರಟೂರ ಗ್ರಾ.ಪಂ ಅಧ್ಯಕ್ಷರಾದ ಚಂದ್ರಮ್ಮ ಓಂಕಾರಿ, ಎಸ್ ಡಿ ಎಮ್ ಸಿ ಗೌರವ ಅಧ್ಯಕ್ಷರಾದ ನೀಲಮ್ಮ ಮಾದಣ್ಣನವರ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಟಕಿ ಪ್ರಾಚಾರ್ಯರಾದ ಎಸ್ ಎ ಅವಾರಿ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಕರವೇಗೆ ಸೇರ್ಪಡೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ ಹೋರಾಟಗಳನ್ನು ಮೆಚ್ಚಿ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ಅವರ ನೇತೃತ್ವದಲ್ಲಿ ನಗರದ ಹಲವು ಯುವಕರು ಕರವೇ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಹನಮಂತಪ್ಪ ಅಬ್ಬಿಗೇರಿ ಮಾತನಾಡಿ, ಕರ್ನಾಟಕ ರಕ್ಷಣಾ ವೇದಿಕೆಗೆ ಗದಗ ನಗರದಲ್ಲಿ ಅನೇಕ ಯುವಕರು ಸೇರುತ್ತಿದ್ದು, ಕರವೇಗೆ ಜಿಲ್ಲೆಯಲ್ಲಿ ಹೆಚ್ಚಿನ ಶಕ್ತಿ ಬಂದಂತಾಗಿದೆ ಎಂದರು.



ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಮುತ್ತಣ್ಣ ಚೌಡಣ್ಣವರ್, ಸಲೀಂ ಸಿರಿವಾರ, ಸಲೀಂ ಬೋದ್ಲೆಖಾನ್, ಶ್ರೀಕಾಂತ್, ಸಿರಾಜ್ ಹೊಸಮನಿ ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

# ಫಲಾನುಭವಿಗಳೊಂದಿಗೆ ಸಂವಾದ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ನೋಡಲ್ ಅಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ ಅಟಲ್ ಭೂಜಲ ಯೋಜನೆ, ಗದಗ ಇವರ ವತಿಯಿಂದ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರ ಹಾಗೂ ವಿಶ್ವ ಬ್ಯಾಂಕಿನ ನೆರವಿನ ಪಾಲುದಾರಿಕೆಯಲ್ಲಿ ಅಟಲ್ ಭೂಜಲ್ ಯೋಜನೆ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಜಲ ಸಂಪನ್ಮೂಲ, ನದಿ ಅಭಿವೃದ್ಧಿ ಮತ್ತು ಗಂಗಾ ಪುನಶ್ಚೇತನ, ಜಲಶಕ್ತಿ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಸುಬೋಧ ಯಾದವ್ ಅವರು ಇತ್ತೀಚೆಗೆ ಗದಗ ತಾಲೂಕಿನ ಹರ್ತಿ ಗ್ರಾಮ ಪಂಚಾಯಿತಿಯಲ್ಲಿ ಅಟಲ್ ಭೂಜಲ ಯೋಜನೆಯ ಸಮುದಾಯ ಸಹಭಾಗಿತ್ವ ಅಂತರ್ಜಲ ನಿರ್ವಹಣಾ ಸಮಿತಿಯ ಸದಸ್ಯರು, ಫಲಾನುಭವಿಗಳೊಂದಿಗೆ ಸಂವಾದ ಕಾರ್ಯಕ್ರಮ ನಡೆಸಿದರು.

ಕಾರ್ಯಕ್ರಮದಲ್ಲಿ ಹರ್ತಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ದೇವಕ್ಕ ಅಸುಂಡಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ , ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್. ರಾಜ್ಯ ಕಾರ್ಯಕ್ರಮ ನಿರ್ವಾಹಣಾ ಘಟಕ ಯೋಜನಾ ನಿರ್ದೇಶಕ ರಾಮಚಂದ್ರಯ್ಯ ಪ್ರತುಲ್ ಸಕ್ಸೇನಾ, ಶ್ರೀಮತಿ ಮಧುಮತಿ, ವಿಜ್ಞಾನಿಗಳಾದ ಶ್ರೀಮತಿ ಸಂಗೀತಾ, ಶ್ರೀಮತಿ ದೀಪಾ ಗುಪ್ತಾ , ಮುರುಳಿಧರ್ ಎಸ್. ಎಮ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಉಪ-ವಿಭಾಗ ಗದಗ ಮತ್ತು ನೋಡಲ್ ಅಧಿಕಾರಿಗಳು ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ, ಸಂತೋಷ ಸಿ ಪ್ಯಾಟಿ ಗಾಣಿಗೇರ್ ಹಿರಿಯ ಭೂ-ವಿಜ್ಞಾನಿಗಳು, ಜಿಲ್ಲಾ ಅಂತರ್ಜಲ ನಿರ್ದೇಶನಾಲಯ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟೆಮನಿ, ಉಪ ಕೃಷಿ ನಿರ್ದೇಶಕರಾದ ಶ್ರೀಮತಿ ಸ್ಫೂರ್ತಿ ಜಿ. ಎಸ್ ಹಾಜರಿದ್ದರು.




ಗದುಗಿನ ಅಡವಿಸೋಮಾಪೂರ ಸಣ್ಣ ತಾಂಡೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ 1ರಿಂದ 5ನೇ ತರಗತಿಯ ಮಕ್ಕಳಿಗೆ ಶೂ ಮತ್ತು ಸಾಕ್ಸ್ ವಿತರಣೆ ಮಾಡಲಾಯಿತು. ಶಾಲಾ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್, ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಎಸ್‌ಡಿಎಂಸಿ ಅಧ್ಯಕ್ಷ ಮಾರುತಿ ಪವಾರ, ಗ್ರಾ.ಪಂ ಸದಸ್ಯ ವೆಂಕಟೇಶ್ ಲಮಾಣಿ, ಮೌನೇಶ ಲಮಾಣಿ, ರಾಮಪ್ಪ ಲಮಾಣಿ, ಅಡುಗೆ ಸಿಬ್ಬಂದಿಗಳಾದ ಸಾವಿತ್ರಿ ರಾಠೋಡ, ಗಂಗವ್ವ ಲಮಾಣಿ, ದೇವಕ್ಕ ಲಮಾಣಿ ಮುಂತಾದವರಿದ್ದರು.

# ನೇಕಾರರಿಗೆ ಆರ್ಥಿಕ ಬಲ ತುಂಬಿ




**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಕೈಮಗ್ಗವು ಉದ್ಯೋಗದ ಅತೀ ದೊಡ್ಡ ಕ್ಷೇತ್ರಗಳಲ್ಲಿ ಒಂದಾಗಿದೆ. ಗ್ರಾಮೀಣ ಆರ್ಥಿಕತೆಯಲ್ಲಿ ಹೆಚ್ಚು ಮಹತ್ವದ್ದಾಗಿದೆ. ಮಹಿಳೆಯರಿಗೆ ಅತೀ ಹೆಚ್ಚು ಸಂಖ್ಯೆಯಲ್ಲಿ ಉದ್ಯೋಗ ಕಲ್ಪಿಸಿಕೊಡುತ್ತದೆ ಮತ್ತು ಆರ್ಥಿಕ ಸಬಲೀಕರಣಗೊಳಿಸುತ್ತದೆ ಎಂದು ಹರಪನಹಳ್ಳಿ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಸಪ್ನ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಪಟ್ಟಣದ ಬಸಮ್ಮ ಕಲಾಮಂದಿರದಲ್ಲಿ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಪ್ರಯುಕ್ತ ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕೈಮಗ್ಗ ದಿನದ ಇತಿಹಾಸವು ಆಗಸ್ಟ್ 1905ರಲ್ಲಿ ಪ್ರಾರಂಭವಾದ ಸ್ವದೇಶಿ ಚಳುವಳಿಯಿಂದ ಹುಟ್ಟಿಕೊಂಡಿದೆ. ದೇಶೀಯ ಉದ್ಯಮವನ್ನು ಪುನಃ ಸ್ಥಾಪಿಸಲು ಮತ್ತು ಬ್ರಿಟಿಷ್ ಸರಕುಗಳ ಆಮದನ್ನು ಕಡಿಮೆ ಮಾಡುವ ಪ್ರಯತ್ನವಾಗಿತ್ತು. ಎಲ್ಲರೂ ಕೈಮಗ್ಗ ಉತ್ಪನ್ನಗಳನ್ನು ಖರೀದಿಸಿ ಬಳಸುವುದರ ಮೂಲಕ ಭಾರತದ ಸಾಂಪ್ರದಾಯಿಕ ನೇಕಾರರಿಗೆ ಆರ್ಥಿಕ ಬಲ ತುಂಬಬೇಕಾಗಿದೆ ಎಂದರು.

ಬಿಜೆಪಿ ಮಹಿಳಾ ಮೋರ್ಚಾ ಪದಾಧಿಕಾರಿಗಳು ಮತ್ತು ಸದಸ್ಯರು ಕೈಮಗ್ಗ ಉತ್ಪನ್ನಗಳನ್ನು ಧರಿಸಿ ಖಾದಿ ಗ್ರಾಮೋದ್ಯೋಗ ಭಂಡಾರಕ್ಕೆ ಭೇಟಿ ನೀಡಿ ಕೈಮಗ್ಗದ ವಿವಿಧ ವಸ್ತುಗಳನ್ನು ಖರೀದಿಸಿದರು. ಕಾರ್ಯಕ್ರಮದಲ್ಲಿ ಪ್ರಧಾನ ಕಾರ್ಯದರ್ಶಿ ಮಂಜುಳಾ ನಾಗರಾಜ, ಉಪಾಧ್ಯಕ್ಷರಾದ ಉಮಾದೇವಿ, ಜಾನಕಮ್ಮ, ಕಲ್ಪನಾ, ಖಜಾಂಚಿ ಕೆ.ಎಂ. ಕೊಟ್ರಮ್ಮ, ಪದ್ಮಾವತಿ, ಶೀಲಾ, ರೇಣುಕಮ್ಮ, ಮಂಜುಳಾ ಕೆ. ಮಂಜುಳಾ ಮಡಿವಾಳರ ಉಪಸ್ಥಿತರಿದ್ದರು.

ಜೀವನ ದರ್ಶನ ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಒಪ್ಪತ್ತೇಶ್ವರ ಮಹಾಸ್ವಾಮಿಗಳು

# ಹೆತ್ತವರ, ಗುರುವೃಂದದ ಗೌರವ ಹೆಚ್ಚಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ನಾನು ಎಂಬ ಅಹಂಕಾರವನ್ನು ಮರೆತು ಎಲ್ಲರಲ್ಲೂ ಒಂದಾಗಿ ಸುಖ, ಶಾಂತಿಯಿಂದ ನೆಮ್ಮದಿಯ ಜೀವನ ಸಾಗಿಸಬೇಕು. ಸಂಪತ್ತು ಮುಖ್ಯವಲ್ಲ, ಸಂತೃಪ್ತಿ ಮುಖ್ಯ. ವಿದ್ಯಾರ್ಥಿಗಳು ತಮ್ಮ ಮುಂದಿನ ಜೀವನವನ್ನು ಸುಖಮಯವಾಗಿಸಿಕೊಳ್ಳಲು ಒಳ್ಳೆಯ ರೀತಿಯಿಂದ ಅಭ್ಯಾಸ ಮಾಡಿ ಹೆತ್ತ ತಂದೆ-ತಾಯಿಗಳಿಗೆ, ಗುರುವೃಂದಕ್ಕೆ ಹೆಸರು ತರಬೇಕು ಎಂದು ಗುಳೇದಗುಡ್ಡ ಒಪ್ಪತ್ತೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಮ.ನಿ.ಪ್ರ. ಅಭಿನವ ಒಪ್ಪತ್ತೇಶ್ವರ ಮಹಾಸ್ವಾಮಿಗಳು ನುಡಿದರು.

ಇಲ್ಲಿನ ವಿವೇಕಾನಂದ ನಗರದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ವತಿಯಿಂದ ಹಮ್ಮಿಕೊಂಡಿದ್ದ 39ನೇ ಜೀವನ ದರ್ಶನ ಕಾರ್ಯಕ್ರಮ, ಶ್ರೀ ಕಾಶಿ ವಿಶ್ವನಾಥ ಪಾಲಕಿ ಸೇವೆ, ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಆಶೀರ್ವಚನ ನೀಡಿದರು.

ಮುಖ್ಯ ಅತಿಥಿಗಳಾದ ಪ್ರೊ. ವೀರನಗೌಡ ಮರಿಗೌಡ್ರ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಗುರಿಯಿಟ್ಟುಕೊಂಡು ಅಧ್ಯಯನ ಮಾಡಬೇಕು. ಏನೇ ಆಗಿರಿ ಮೊದಲು ಮಾನವರಾಗಿರಿ. ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕೆಂದು ಹಲವಾರು ದೃಷ್ಟಾಂತದ ಮೂಲಕ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷ ಪ್ರೊ. ಎಮ್.ಎನ್. ಕಾಮನಹಳ್ಳಿ ಮಾತನಾಡಿ, ವಿದ್ಯಾರ್ಥಿಗಳು ದೊಡ್ಡ ಕನಸನ್ನು ಇಟ್ಟುಕೊಂಡು ಗುರಿ, ಸಾಧನೆಯನ್ನು ಮಾಡಬೇಕು. ಜ್ಞಾನವೇ ಅತೀ ಮುಖ್ಯ, ಜ್ಞಾನವೇ ಶಕ್ತಿ ಎಂದು ಹೇಳಿದರು.

ಲಕ್ಕುಂಡಿ ಪಾರಂಪರಿಕ ಪ್ರಾದೇಶಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಪದೋನ್ನತಿ ಹೊಂದಿದ ಡಾ. ಶರಣು ಗೋಗೇರಿಯವರನ್ನು ಸನ್ಮಾನಿಸಲಾಯಿತು. ನಿರ್ಮಲ ಪಾಟೀಲ ಸ್ವಾಗತ ಗೀತೆ ಹಾಡಿದರು. ಶಾಂತಾ ತುಪ್ಪದ, ಕವಿತಾ ಕೊಣ್ಣೂರು, ವಾಣಿ ಯರನಾಳ ಮತ್ತು ಸೌಮ್ಯ ಕುರಗೋಡ ನಿರ್ವಹಿಸಿದರು. ಎಮ್.ಬಿ. ಚನ್ನಪ್ಪಗೌಡ ಪರಿಚಯಿಸಿದರು. ಕೆ.ಐ. ಕುರಗೋಡ ನಿರೂಪಿಸಿದರು. ಪ್ರಸಾದ ಸೇವೆ ಮಾಡಿದ ಎಸ್.ಡಿ. ಕುಲಕರ್ಣಿ ದಂಪತಿಗಳನ್ನು ಸನ್ಮಾನಿಸಲಾಯಿತು. ವೇದಿಕೆಯ ಮೇಲೆ ಸಮಿತಿಯ ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಮಿತಿಯ ಪದಾಧಿಕಾರಿಗಳಾದ ಅಂಬರೇಶ ಹಾದಿ, ರಂಗಣ್ಣ ಒಡೆಯರ, ಮಹಾದೇವಿ ಗೋಗೇರಿ, ರಾಧಿಕಾ ಬಂದಮ, ವಿ.ಆರ್. ಕುಲಕರ್ಣಿ, ವಿ.ವಾಯ್. ಮಕ್ಕಣ್ಣವರ, ಬಿ.ಎನ್. ಯರನಾಳ, ಎಸ್.ಎಸ್. ಪಾಟೀಲ, ವ್ಹಿ.ಕೆ. ಗುರುಮಠ, ಪ್ರೊ. ಗರಡಿಮನಿ, ಯಾಳಗಿ, ಕೊಣ್ಣೂರು, ರಾಮಣ್ಣ ಕಾಶಪ್ಪನವರ, ತುಪ್ಪದ, ರೆಡ್ಡೇರ, ತಿರ್ಲಾಪೂರ, ಎಸ್.ಎಸ್. ಪಾಳೇಗಾರ, ಎಸ್.ಐ. ಅಣ್ಣಿಗೇರಿ, ಜಗದಾಳೆ, ಪುಷ್ಪಾ ಭಂಡಾರಿ ಮುಂತಾದವರು ಭಾಗವಹಿಸಿದ್ದರು.



ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆ ಮಾಡಿದ ನಿಖಿತಾ ರೇವಣಕುಂಡಿ, ಶ್ವೇತಾ ಎಸಿ, ವಿನಯ ಮೋಹನ, ಹರ್ಷಾ ಮಡಿವಾಳರ, ಚಿನ್ಮಯಸ್ವಾಮಿ ಹಿರೇಮಠ, ತೇಜಸ್ ಕೇರಿ, ರಂಗನಗೌಡ ಕಲ್ಲನಗೌಡರ, ರೇವಪ್ಪ ಕುರಿ, ಸೌಮ್ಯ, ಪ್ರಸನ್ನ ರಂಗರೇಜಿ, ಅನುರಾಗ ಬೆರಗೇರಿ ಇವರನ್ನು ಸನ್ಮಾನಿಸಲಾಯಿತು.

## ವಿದ್ಯಾರ್ಥಿ ದಿಸೆಯಿಂದಲೇ ಬ್ಯಾಂಕಿನ ವ್ಯವಹಾರ ತಿಳಿಯಿರಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ದಿಸೆಯಿಂದಲೇ ಬ್ಯಾಂಕಿನ ವ್ಯವಹಾರಗಳನ್ನು ತಿಳಿದಿರಬೇಕಾದುದು ಅವಶ್ಯಕವಾಗಿದೆ. ಇಂದಿನ ದಿನಗಳಲ್ಲಿ ಎಲ್ಲ ವ್ಯವಹಾರವೂ ಬ್ಯಾಂಕ್ ಆಧಾರಿತವಾಗಿದ್ದು, ಬ್ಯಾಂಕಿನ ಮಹತ್ವ ಮತ್ತು ಬ್ಯಾಂಕಿನ ವ್ಯವಹಾರಗಳ ಜ್ಞಾನ ನಿಮಗಿರಬೇಕಾದುದು ಅವಶ್ಯಕ ಎಂದು ಕರ್ನಾಟಕ ಬ್ಯಾಂಕಿನ ಹಿರಿಯ ಗ್ರಾಹಕ ಸೇವಾ ಸಹವರ್ತಿ ರಂಗನಾಥ ಕುಲಕರ್ಣಿ ಹೇಳಿದರು.

ಸಮೀಪದ ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳಿಗಾಗಿ ನಡೆದ ಬ್ಯಾಂಕ್ ವ್ಯವಹಾರಗಳು ವಿಷಯದಲ್ಲಿ ಅವರು ಮಾತನಾಡಿದರು.

ಮೊದಲು ಬ್ಯಾಂಕಿನಲ್ಲಿ ನಿಮ್ಮ ಹೆಸರಿನಲ್ಲಿ ಖಾತೆಯೊಂದನ್ನು ತೆರೆಯಬೇಕು. ಖಾತೆ ತೆರದ ತಕ್ಷಣ ನಿಮಗೆ ಒಂದು ಸಂಖ್ಯೆಯನ್ನು ನೀಡಲಾಗುತ್ತಿದೆ. ಇದನ್ನು ಖಾತಾ ಸಂಖ್ಯೆ ಅಥವಾ ಅಕೌಂಟ್ ನಂಬರ್ ಎಂದು ಕರೆಯಲಾಗುತ್ತದೆ. ಬ್ಯಾಂಕಿನಲ್ಲಿ ಮುಂದಿನ ನಿಮ್ಮ ಯಾವುದೇ ವ್ಯವಹಾರವಿದ್ದರೂ ಅದನ್ನು ಈ ಅಕೌಂಟ್ ನಂಬರ್ ಮೂಲಕ ಮಾಡಬೇಕಾಗುತ್ತದೆ ಎಂದು ಕುಲಕರ್ಣಿ ತಿಳಿಸಿದರು.

ಬ್ಯಾಂಕಿನ ವ್ಯವಹಾರಗಳನ್ನು ಹೇಗೆ ಮಾಡಬೇಕು ಎಂಬುದರ ಬಗ್ಗೆ 10ನೇ ತರಗತಿ ವಿದ್ಯಾರ್ಥಿಗಳೊಂದಿಗೆ ವಿಶೇಷ ಸಂವಾದ ನಡೆಯಿತು. ವಿದ್ಯಾರ್ಥಿಗಳ ಹಲವಾರು ಪ್ರಶ್ನೆಗಳು ಮತ್ತು ಸಂದೇಹಗಳಿಗೆ ರಂಗನಾಥ ಕುಲಕರ್ಣಿ ಹಾಗೂ ಕರ್ನಾಟಕ ಬ್ಯಾಂಕ್ ಮತ್ತು ಅಕ್ಸಾ ಲೈಫ್ ಸಂಬಂಧಾಧಿಕಾರಿ ರಾಜೇಶ ಕಾಮಾಜಿಯವರು ಸಮರ್ಪಕ ಉತ್ತರಗಳನ್ನು ನೀಡಿ ಮಕ್ಕಳ ಜ್ಞಾನ ದಾಹವನ್ನು ತಣಿಸುವ ಪ್ರಯತ್ನ ಮಾಡಿದರು.

ಶಾಲೆಯ ಮುಖ್ಯೋಪಾಧ್ಯಾಯ ವಿ.ಎಸ್. ಚಲವಾದಿ ಅಧ್ಯಕ್ಷತೆ ವಹಿಸಿದ್ದರು. ದೈಹಿಕ ಶಿಕ್ಷಕ ಸಿ.ಎಂ. ಗೋದಿ ಸ್ವಾಗತಿಸಿದರು.

## ರೊಟ್ಟಿ ಪಂಚಮಿಯ ಸಡಗರ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣ ಸೇರಿದಂತೆ ಸುತ್ತಲಿನ ಗ್ರಾಮಗಳಲ್ಲಿ ನಾಗರ ಪಂಚಮಿ ಮುನ್ನಾ ದಿನವಾದ ಬುಧವಾರ ರೊಟ್ಟಿ ಪಂಚಮಿಯನ್ನು ಮಹಿಳೆಯರು ಸಂಭ್ರಮದಿಂದ ಆಚರಿಸಿದರು. ಶ್ರಾವಣ ಮಾಸ ಆರಂಭವಾಗುತ್ತಿದ್ದಂತೆ ಉತ್ತರ ಕರ್ನಾಟಕದಲ್ಲಿ ನಾನಾ ಹಬ್ಬಗಳಿಗೆ ಮುನ್ನಡಿ ಬರೆಯಲಾಗುತ್ತದೆ. ತಿಂಗಳ ಪೂರ್ತಿ ಮನೆಯಲ್ಲಿ ಒಂದಿಲ್ಲೊಂದು ಪೂಜೆ, ವ್ರತ ಕೈಗೊಳ್ಳುತ್ತಾರೆ. ಅದರಲ್ಲೂ ಆರಂಭದಲ್ಲೇ ಬರುವ

ಪಂಚಮಿ ಹಬ್ಬದ ರೊಟ್ಟಿ ಸಂಭ್ರಮ ಉತ್ತರ ಕರ್ನಾಟಕದಲ್ಲಿ ವೈಶಿಷ್ಟತೆ ಪಡೆದುಕೊಂಡಿದೆ.

ಪ್ರತಿ ವರ್ಷ ಮುಂಗಾರು ಮಳೆ ಅನ್ನದಾತನಿಗೆ ಅನುಕೂಲವಾಗುಷ್ಟು ಸುರಿದು ಕೃಷಿ ಭೂಮಿಯಲ್ಲಿ ಬೆಳೆದ ಬೆಳೆಗಳ ಮೊದಲು ಫಸಲಿನ ಸಂತಸವನ್ನು ರೊಟ್ಟಿ ಮತ್ತು ವಿವಿಧ ತರಕಾರಿ ಹಾಗೂ ಕಾಳುಗಳ ಪಲ್ಯದೊಂದಿಗೆ ಎಲ್ಲರೂ ಪರಸ್ಪರ ಹಂಚಿಕೊಳ್ಳುವುದು ಈ ರೊಟ್ಟಿ ಹಬ್ಬದ ವಿಶೇಷತೆ.

ಅದರಂತೆ ನಾಗ ಪಂಚಮಿ ಮುನ್ನಾದಿನ ಬೆಳಿಗ್ಗೆ ಮನೆಯನ್ನು ಶುದ್ಧಗೊಳಿಸಿ ಮನೆ ಮಂದಿಯೆಲ್ಲಾ ಅಭ್ಯಂಗ ಸ್ನಾನ ಮಾಡಿ, ಮನೆಗಳಲ್ಲಿ ಜೋಳದ ರೊಟ್ಟಿ, ಸಜ್ಜಿ ರೊಟ್ಟಿ, ಅಕ್ಕಿರೊಟ್ಟಿ, ಚಪಾತಿ, ಎಣ್ಣೆಗಾಯಿ, ಬದನೆಕಾಯಿ, ಮೊಸರು ಚಟ್ನಿ, ಶೇಂಗಾ ಚಟ್ನಿ, ಕಡಲೆ ಚಟ್ನಿ, ಹಸಿರು ತರಕಾರಿ ಹೀಗೆ ವಿವಿಧ ಬಗೆಯ ಖಾದ್ಯಗಳನ್ನು ತಯಾರಿಸಿ ಸುತ್ತಲಿನ ಮನೆಯವರೊಂದಿಗೆ ಪರಸ್ಪರ ವಿನಿಮಯ ಮಾಡಿಕೊಂಡರು.

ಚಿಕ್ಕಮಕ್ಕಳು ಕೈಯಲ್ಲಿ ರೊಟ್ಟಿಗಳನ್ನು ಹಿಡಿದುಕೊಂಡು ಮನೆ ಮನೆಗೆ ತಲುಪಿಸುವ ಮೂಲಕ ಜಾತಿ-ಬೇಧ ಮರೆತು ಭಾವೈಕ್ಯತೆಯ ಸಂದೇಶ ಸಾರಿದರು. ಹೊಸದಾಗಿ ಮದುವೆಯಾದ ಎಲ್ಲ ಮಹಿಳೆಯರು ತಮ್ಮ ತವರು ಮನೆಗೆ ಹಬ್ಬಕ್ಕೆಂದು ಆಗಮಿಸಿ ಕುಟುಂಬದವರೊಂದಿಗೆ ಭೋಜನವನ್ನು ಸವಿದು ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

## ಅಂಜುಮನ್ ಸಂಸ್ಥೆಗೆ ಚುನಾವಣೆ ಘೋಷಿಸುವಂತೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಮುಸ್ಲಿಂ ಸಮುದಾಯ ನಿಯೋಜಿತ ಸಮಿತಿ ಗದಗ ವತಿಯಿಂದ ವಕ್ಫ್ ಜಿಲ್ಲಾಧ್ಯಕ್ಷರಿಗೆ ಗದಗ-ಬೆಟಗೇರಿ ಅಂಜುಮನ್-ಏ-ಇಸ್ಲಾಂ ಸಂಸ್ಥೆಗೆ ಚುನಾವಣೆಗೆ ಘೋಷಿಸಲು ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿದ ಅಧ್ಯಕ್ಷರು, ಹಲವು ವರ್ಷಗಳಿಂದ ಗದಗ ಅಂಜುಮನ್ ಸಂಸ್ಥೆಗೆ ಚುನಾವಣೆ ನಡೆದಿಲ್ಲ. ಮುಂದಿನ ಜಿಲ್ಲಾ ಬೋರ್ಡ್‌ನ ಸಭೆಯಲಿಡೀ ವಿಷಯನ್ನು ತೆಗೆದುಕೊಂಡು ರಾಜ್ಯ ಸಮಿತಿಗೆ ಕಳುಹಿಸಿ ಬೈಲಾ ಅನುಮೋದನೆ ಪಡೆದು, ಚುನಾವಣೆ ಪ್ರಕ್ರಿಯೆಯನ್ನು ನಡೆಸುವುದಾಗಿ ಆಶ್ವಾಸನೆ ನೀಡಿದರು.

ಈ ಸಂದರ್ಭದಲ್ಲಿ ಮಸಜ್ಜಿದ ಎ ಇಸ್ಮಾಯಲ್, ಅಬೂಬಕರ ಮಜ್ಜೀದ, ಬೆಟಗೇರಿ-ಗದಗ ರಹೆಮಾನಶಾವಲಿ ದರ್ಗಾ ಮತ್ತು ಮಸಜೀದ ಕಮಿಟಿ, ಅಲ್ ಅರಫಾತ ಜಮಾತ ಟ್ರಸ್ಟ್, ಯಾಸೀರ ಎಜ್ಯುಕೇಶನಲ್ ಆ್ಯಂಡ್ ಸೋಷಿಯಲ್ ವೆಲ್‌ಫೇರ್ ಟ್ರಸ್ಟ್ ಯಾಸೀರ ಮಸಜೀದ ಮುಸ್ಲಿಂ ಜಮಾತ, ಮಸಜೀದ ಎ ರಹತ, ನೂರಾನಿ ಮಸ್ಜೀದ ಮುಸ್ಲಿಂ ಜಮಾತ, ಖಾನಬಾಗ ಮುಸ್ಲಿಂ ಜಮಾತ, ಅಕ್ಸಾ ಮಜೀದ ಜಮಾತ್, ಮುಬಾರಕ ಮಸಜೀದ, ಇಸ್ಲಾಮಿಯಾ ಜಮಾತ್, ನೌಜವಾನ ಯಂಗ್ ಕಮಿಟಿ, ರಹಮನಿಯಾ ಮಜ್ಜೀದ ಜಮಾತ್, ಅಲ್ಲಾ ನರಗರಡಿ ಮುಸ್ಲಿಂ ಜಮಾತ್, ಅಹದ್ ಜಮಾತ, ನಿಜಾಮುದ್ದೀನ ಜಮಾತ, ಮುಕ್ತುಮ್ ಮಜ್ಜೀದ್, ಈ ಎಲ್ಲ ಜಮಾತಿನವರು, ಮುಸ್ಲಿಂ ಬಾಂಧವರು ಭಾಗಿಯಾಗಿದ್ದರು.



## ಬೆಂಬಲ ಬೆಲೆಯಲ್ಲಿ ಹೆಸರು ಖರೀದಿಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ರೋಣ



ತಾಲೂಕಿನ ಹೆಚ್ಚಿನ ರೈತರು ಕಳೆದ ವರ್ಷ ಉಳ್ಳಾಗಡ್ಡಿ, ಮೆಣಸಿನಕಾಯಿ ಬೆಳೆ ಹೆಚ್ಚು ಬೆಳೆದು ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಇಲ್ಲದೆ ಕಂಗಲಾಗಿದ್ದರು. ಇನ್ನು ಮೆಣಸಿನಕಾಯಿಯನ್ನು ಮನೆಯಲ್ಲಿಯೇ ದಾಸ್ತಾನು ಮಾಡಿಟ್ಟುಕೊಂಡು ಕಷ್ಟ ಅನುಭವಿಸುತ್ತಿದ್ದಾರೆ.

ಈ ವರ್ಷ ಅಲ್ಪ ಸ್ವಲ್ಪ ಮಳೆಯಾಗಿದೆ. ಈಗ 15 ದಿನದಿಂದ ಸುರಿದ ಮಳೆಗೆ ಹೆಸರು ಬೆಳೆಗೆ ಕೀಟ ಬಾಧೆ ತಗುಲಿದ್ದು, ಮಾರುಕಟ್ಟೆಯಲ್ಲಿ ಸೂಕ್ತ ಬೆಲೆಯೂ ಇಲ್ಲದಂತಾಗಿದೆ. ಸರಕಾರದ ಛಿ ದರ 8500 ರೂಗಳಿಗಿಂತ ಹೆಚ್ಚು ಇದ್ದು, ಮಾರುಕಟ್ಟೆಯಲ್ಲಿ ದಲ್ಲಾಳಿಗಳು 4 ರಿಂದ 5 ಸಾವಿರಕ್ಕೆ ಖರೀದಿ ಮಾಡುತ್ತಿದ್ದಾರೆ. ರೈತರ ಪರವಾಗಿ ಇರಬೇಕಾದ ಸರಕಾರ ರೈತರ ವಿರೋಧಿಯಾಗಿದೆ.

ಶೀಘ್ರದಲ್ಲಿ ಬೆಂಬಲ ಬೆಲೆ ಯೋಜನೆಯಲ್ಲಿ ಹೆಸರು ಖರೀದಿ ಕೇಂದ್ರ ಪ್ರಾರಂಭಿಸಲು ರೋಣ ತಾಲೂಕು ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸೋಮು ಚರೇದ, ಬಿಜೆಪಿ ಮುಖಂಡರಾದ ಇಸ್ಮಾಯಿಲ್ ಗದಗ, ಸಂಗಪ್ಪ ಗುದ್ಲಿ, ಅಜಿತ್ ನಾಗನೂರ್ ಸೇರಿದಂತೆ ಹಲವರು ಒತ್ತಾಯಿಸಿದ್ದಾರೆ.

## ದೇಹದ ತೂಕದಲ್ಲಿ 100 ಗ್ರಾಂ ಹೆಚ್ಚಳ; ಪ್ಯಾರಿಸ್ ಒಲಿಂಪಿಕ್ಸ್‌ನಿಂದ ಅನರ್ಹಗೊಂಡ ವಿನೇಶಾ ಫೋಗಟ್

■ವಿಜಯಸಾಕ್ಷಿ ಸುದ್ದಿ, ಪ್ಯಾರಿಸ್

ಭಾರತದ ಖ್ಯಾತ ಕುಸ್ತಿಪಟು ವಿನೇಶ್ ಫೋಗಟ್ ಪ್ಯಾರಿಸ್ ಒಲಿಂಪಿಕ್ ಗೇಮ್ಸ್‌ನಲ್ಲಿ ಪದಕ ಗೆಲ್ಲುವ ಅಂತಿಮ ಹಂತಕ್ಕೆ ಬಂದು ನಿಂತಿದ್ದರು. ಆದರೆ, ಈಗ ಸ್ಪರ್ಧೆಯಿಂದ ಸಂಪೂರ್ಣವಾಗಿ ಅನರ್ಹರಾಗಿದ್ದಾರೆ ಎಂಬ ಸುದ್ದಿ ಬರುತ್ತಿದೆ. 50 ಕೆಜಿ ಫ್ರೀಸ್ಟೈಲ್ ಕುಸ್ತಿ ವಿಭಾಗದಲ್ಲಿ ಸ್ಪರ್ಧಿಸುತ್ತಿರುವ ವಿನೇಶ್ ಅವರ ದೇಹದ ತೂಕದಲ್ಲಿ 100 ಗ್ರಾಂ ಹೆಚ್ಚಾಗಿದೆ ಎಂಬ ಕಾರಣಕ್ಕೆ ಸ್ಪರ್ಧೆಯಿಂದ ಅನರ್ಹಗೊಂಡಿದ್ದಾರೆ.

ವಿನೇಶ್ ಸಾಮಾನ್ಯವಾಗಿ 53 ಕೆಜಿ ವಿಭಾಗದಲ್ಲಿ ಸ್ಪರ್ಧಿಸುತ್ತಾರೆ. ಆದರೆ, ಪ್ಯಾರಿಸ್ ಒಲಿಂಪಿಕ್ಸ್‌ಗಾಗಿ ತನ್ನ ತೂಕವನ್ನು 50 ಕೆಜಿಗೆ ಇಳಿಸಿದ್ದರು.

## ಪುರಾಣ ಪ್ರವಚನದಿಂದ ನೆಮ್ಮದಿ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಿವಶರಣರ ಪುರಾಣ ಪ್ರವಚನಗಳನ್ನು ಕೇಳುವುದರಿಂದ ನೆಮ್ಮದಿ ಪ್ರಾಪ್ತಿಯಾಗುತ್ತದೆ ಎಂದು ಪ್ರವಚನಕಾರ ಪಂಚಾಕ್ಷರಯ್ಯ ಎಸ್. ಮರಿದೇವರಮಠ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಧಾರವಾಡದ 'ಮಾತೃ ಹೃದಯ ಮುರುಘಾಮಠದ ಮಾಹಾಂತಪ್ಪಗಳ' ಪ್ರವಚನ ಪ್ರಾರಂಭೋತ್ಸವದಲ್ಲಿ ಮಾತನಾಡಿ, ಇಂದಿನ ಆಧುನಿಕ ತಂತ್ರಜ್ಞಾನ ಯುಗದಲ್ಲಿ ಯುವಕ-ಯುವತಿಯರು ಮೊಬೈಲ್ ದಾಸರಾಗಿ ತಮ್ಮ ಅಮೂಲ್ಯವಾದ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದು, ವರ್ಷದ ಒಂದು ತಿಂಗಳ ಶ್ರಾವಣ ಮಾಸದಲ್ಲಿ ಜರುಗುವ ಶರಣರ ಪ್ರವಚನಗಳನ್ನು ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ ದೊರೆಯುತ್ತದೆ. ಇದರಿಂದ ಮನಸ್ಸಿನಲ್ಲಿರುವ ದುಗುಡ ದುಮ್ಮಾನಗಳು ದೂರವಾಗುತ್ತವೆ. ಶಿವಶರಣರ ತತ್ವ ಸಿದ್ಧಾಂತಗಳು ಇಂದಿಗೂ ನಮ್ಮ ಜೀವನಕ್ಕೆ ಆದರ್ಶಪ್ರಾಯವಾಗಿದ್ದು, ಪ್ರವಚನಗಳನ್ನು ಆಲಿಸುವುದರಿಂದ ಮಕ್ಕಳಲ್ಲಿ ಸಂಸ್ಕಾರ, ಭಕ್ತಿ ಭಾವ ಬೆಳೆಯುತ್ತದೆ ಎಂದರು.

ಹತ್ತಿಮತ್ತೂರ ವಿರಕ್ತಮಠದ ನಿಜಗುಣ ಶಿವಯೋಗಿ ಮಾಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿ, ಶಿವಶರಣರ ವಚನ ಸಾಹಿತ್ಯದ ಮೂಲಕ ನಾಡಿನಾದ್ಯಂತ ಸಂಚರಿಸಿ ಮಾನವ ಕುಲಕ್ಕೆ ದಾರಿ ದೀಪವಾದವರು. ಇಂತಹ ಮಹನೀಯರ ಪ್ರವಚನಗಳನ್ನು ಆಲಿಸುವುದರಿಂದ ಜೀವನ ಸುಗಮವಾಗಿ ಸಾಗಲು ಸಹಕಾರಿಯಾಗುತ್ತದೆ ಎಂದರು.

ಉದ್ಘಾಟನೆಯನ್ನು ಗೌರಮ್ಮಾ ಬಡ್ನಿ ನೆರವೇರಿಸಿದರು. ಅಧ್ಯಕ್ಷತೆಯನ್ನು ಜಾತ್ರಾ ಸಮಿತಿ ಅಧ್ಯಕ್ಷ ಬಸವರಾಜ ಬಾತಾಖಾನಿ ವಹಿಸಿದ್ದರು. ಡಾ. ಗಿರಿಜಾ ಹಸಬಿ ಉಪನ್ಯಾಸ ನೀಡಿದರು., ಡಾ. ಎಸ್.ಸಿ. ಚವಡಿ, ಶಂಕ್ರಪ್ಪ ಮಡ್ಡಿ, ವಿಜಯಲಕ್ಷ್ಮಿ ಹಿರೇಮಠ, ಮಾಹಾಂತೇಶ ಬಳ್ಳಾರಿ, ಹೇಮಂತಕುಮಾರ ಹಿರೇಮಠ, ಎಸ್.ಎಂ. ಉಜ್ಜಣ್ಣವರ, ಮುರುಗೇಶ ನಪೂರಿಮಠ ಇದ್ದರು.






ಭಾರತೀಯ ಜನತಾ ಪಾರ್ಟಿ ಹಾಗೂ ಜೆಡಿಎಸ್ ಪಕ್ಷದಿಂದ ಮುಡಾ ಅಕ್ರಮವನ್ನು ಖಂಡಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆಗೆ ಆಗ್ರಹಿಸಿ ಬೆಂಗಳೂರಿನಿಂದ ಮೈಸೂರವರೆಗಿನ ಪಾದಯಾತ್ರೆಯಲ್ಲಿ ಮಾಜಿ ಸಚಿವರು, ಹಾಲಿ ಶಾಸಕ ಸಿ.ಸಿ. ಪಾಟೀಲ, ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ನೇತೃತ್ವದಲ್ಲಿ ಗದಗ ಜಿಲ್ಲೆಯ ಸಾವಿರಾರು ಕಾರ್ಯಕರ್ತರು, ಮುಖಂಡರು ಭಾಗವಹಿಸಿದ್ದರು.

## ನಿಧನ ವಾರ್ತೆ

### ಅಯ್ಯಪ್ಪ ಭರಮಪ್ಪ ಹಾದಿಮನಿ



ರೋಣ: ಮಾರನಬಸರಿ ಗ್ರಾಮದ ನಿವಾಸಿ ಅಯ್ಯಪ್ಪ ಭರಮಪ್ಪ ಹಾದಿಮನಿ (85) ಬುಧವಾರ ಬೆಳಗಿನ ಜಾವ ತಮ್ಮ ಸ್ವಗೃಹದಲ್ಲಿ ನಿಧನರಾದರು. ಮೃತರು ಮೂವರು ಪುತ್ರರು, ನಾಲ್ವರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಸಂತಾಪ: ಅಯ್ಯಪ್ಪ ಹಾದಿಮನಿ ಅಗಲಿಕೆಗೆ ಮಾಜಿ ಶಾಸಕ ಕಳಕಪ್ಪ ಬಂಡಿ, ರೋಣ, ಗಜೇಂದ್ರಗಡ, ಯಲಬುರ್ಗಾ ತಾಲೂಕಿನ ನ್ಯಾಯವಾದಿ ಸಂಘದ ಪದಾಧಿಕಾರಿಗಳು, ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಕೃ.ಪ.ಸ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

### ನಾರಾಯಣಸಾ ಮೇರವಾಡೆ



ಬೆಟಗೇರಿ: ಸ್ಥಳೀಯ ಪಂಚಲಕ್ಷ್ಮೀ ಬಡಾವಣೆಯ ನಿವಾಸಿ ನಾರಾಯಣಸಾ ಭೋಜಣಸಾ ಮೇರವಾಡೆ (59) ಮಂಗಳವಾರ ನಿಧನರಾದರು. ಮೃತರು ತಾಯಿ, ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

## ನವೀಕೃತ ಮಂದಿರ ಉದ್ಘಾಟನೆ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಜೋಡ ಹನುಮಂತ ದೇವಸ್ಥಾನದ ಭವ್ಯ ನವೀಕೃತ ಕಲ್ಲಿನ ಕಟ್ಟಡ ಉದ್ಘಾಟನೆ ಹಾಗೂ ಧಾರ್ಮಿಕ ಕಾರ್ಯಕ್ರಮದ ಅಂಗವಾಗಿ ಮಂಗಳವಾರ ಸುಮಂಗಲೆಯರಿಂದ ಕುಂಭಮೇಳ ಗದಗ ನಗರದ ಜಗದಂಭಾ ದೇವಸ್ಥಾನದಿಂದ ಪ್ರಾರಂಭವಾಗಿ ಜವಳಿ ಬಜಾರ, ಟಾಂಗಾಕೂಟ ಮೂಲಕ ಶ್ರೀ ಜೋಡ ಹನುಮಂತ ದೇವಸ್ಥಾನ ತಲುಪಿತು. ನಂತರ ಸಮಸ್ತ ಭಕ್ತರು ಪ್ರಸಾದವನ್ನು ಸ್ವೀಕರಿಸಿದರು.

ಬುಧವಾರ ಸಾಯಂಕಾಲ 6ಕ್ಕೆ ಸ್ಥಳ ಶುದ್ಧಿ, ಉದಕ ಶಾಂತಿ, ರಾಕ್ಷೋಘ್ನ ಹೋಮ, ಸುದರ್ಶನ ಹೋಮ ನಡೆಯಿತು.

ಸಮಾರಂಭದ ಅಂಗವಾಗಿ ಗುರುವಾರ ಮುಂಜಾನೆ 5-30ಕ್ಕೆ ನವಗ್ರಹ ಹೋಮ, ಗಜ ಹೋಮ, ವಾಸ್ತು ಮಂಡಲ ಹೋಮ, ಮುಖ್ಯ ದೇವತಾ ಶ್ರೀ ಮಾರುತಿ ಪ್ರಾಣ ಪ್ರತಿಷ್ಠಾಪನೆಯ ಹೋಮ, ದಿಗ್ಬಂಧನ, ಬಲಿಹರಣ, ಪ್ರಾಯಶ್ಚಿತ್ತ ಹೋಮ, ಸಂಕ್ಷೇಪ ಪೂರ್ಣಾಹುತಿ ಜರುಗಿ ನಂತರ ಪ್ರಸಾದ ವಿತರಣೆ ಕಾರ್ಯಕ್ರಮ ನಡೆಯುವುದು.

ಆಗಸ್ಟ್ 9ರಂದು ಮುಂಜಾನೆ 5-30ಕ್ಕೆ ಪ್ರಾಣ ಪ್ರತಿಷ್ಠಾಪನೆ ಮತ್ತು ಲೋಕಾರ್ಪಣೆ ಕಾರ್ಯಕ್ರಮ, ಪ್ರಾಣಪ್ರತಿಷ್ಠಾಪನೆ, ನಂತರ ಭಕ್ತಾಧಿಗಳಿಗೆ ಶ್ರೀ ಜೋಡ ಮಾರುತಿಯ ದಿವ್ಯ ಸಾನಿಧ್ಯ ದರ್ಶನ, ಮಹಾ ಅನ್ನಸಂತರ್ಪಣೆ ಜರುಗುವುದು ಎಂದು ಟ್ರಸ್ಟ್ ಪ್ರಕಟಣೆ ತಿಳಿಸಿದೆ.



ಶ್ರೀರಂಜನಿ ಕಿದಿಯೂರು ನಿಧನ

## ಸಂಪಾದಕರ ಸಂಘದಿಂದ ಸಂತಾಪ



ಗದಗ: ನವೋದಯ ದಿನಪತ್ರಿಕೆಯ ಸಂಪಾದಕರಾದ ರಾಜೀವಲೋಚನ ಕಿದಿಯೂರ ಅವರ ಧರ್ಮಪತ್ನಿ ಶ್ರೀಮತಿ ಶ್ರೀರಂಜಿನಿ ರಾಜೀವಲೋಚನ ಕಿದಿಯೂರ(69) ಅವರು ಮಂಗಳವಾರ ರಾತ್ರಿ ನಿಧನರಾದರು.

ಅವರ ನಿಧನಕ್ಕೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಘಟಕ ಸಂತಾಪ ವ್ಯಕ್ತಪಡಿಸಿದೆ.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷರಾದ ಮಂಜುನಾಥ್ ಅಬ್ಬಿಗೇರಿ ಮಾತನಾಡಿ, ಶ್ರೀರಂಜನಿ ಅವರ ಅಗಲಿಕೆ ಮನಸ್ಸಿಗೆ ಬಹಳಷ್ಟು ನೋವುಂಟು ಮಾಡಿದೆ. ಅವರ ಅಗಲಿಕೆಯ ದುಃಖವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಭಗವಂತ ನೀಡಲಿ ಎಂದು ಹಾರೈಸಿದ ಅವರು, ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಸಂತಾಪ ವ್ಯಕ್ತಪಡಿಸಿದರು.

ಸಂತಾಪ ಸಭೆಯಲ್ಲಿ ನೂರಅಹ್ಮದ್ ಮಕಾನದಾರ, ಎನ್ ಆರ್ ಬಾಂಡಗೆ, ಅಜಿತ್ ಹೊಂಬಾಳಿ, ದೇವಪ್ಪ ಲಿಂಗದಾಳ, ರಾಜು ಹೆಬ್ಬಳ್ಳಿ, ರವಿಕಾಂತ್ ಅಂಗಡಿ, ಎಚ್ ಎಮ್ ಶರೀಫ್‌ನವರ್, ಜಗದೀಶ ಪೂಜಾರ, ಕೊಟ್ರೇಶ ಅಬ್ಬಿಗೇರಿ, ಕುನಲ್ ಅಬ್ಬಿಗೇರಿ, ಸತೀಶ ಜಿ ತಡಸದ ಇದ್ದರು.

**ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಆತಂಕ**

# ಕೈಮಗ್ಗ ಉಳಿಯುವುದು ಕಷ್ಟಕರ



■ವಿಜಯಸಾಕ್ಷಿ ಸುದ್ದಿ, ಗದಗ

ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಜವಳಿ ಮತ್ತು ಕೈಮಗ್ಗ ಉಳಿಸುವುದನ್ನು ಸವಾಲಾಗಿ ಸ್ವೀಕರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ನರಸಾಪೂರದಲ್ಲಿರುವ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ ಬುಧವಾರ 10ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಉದ್ಘಾಟಿಸಿ ಅವರು ಮಾತನಾಡಿದರು.

ಕೈಮಗ್ಗ ತಂತ್ರಜ್ಞಾನ ಸಂಸ್ಥೆ ಬೆಟಗೇರಿಯಲ್ಲಿ ಸ್ಥಾಪನೆಯಾಗಲು ಮೂಲ ಕಾರಣ ಸ್ಥಳೀಯ ನೇಕಾರರು. ಅಂದಿನ ಸರ್ಕಾರ ರಾಷ್ಟ್ರದಲ್ಲಿ ಉತ್ತಮ ಜವಳಿ ನೀತಿ ಮಾಡಿ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ಪ್ರಾರಂಭಿಸಲು ನಿರ್ಧರಿಸಿತು. ಅದರ ಪ್ರತಿಫಲವಾಗಿ ರಾಜ್ಯದಲ್ಲಿಯೇ ಏಕೈಕ ಕೈಮಗ್ಗ ಸಂಸ್ಥೆ ಗದಗ ಜಿಲ್ಲೆಯಲ್ಲಿ ಸ್ಥಾಪನೆಯಾಯಿತು ಎಂದು ಹೇಳಿದರು.

ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ ತರಬೇತಿ ಪಡೆಯುವ ವಿದ್ಯಾರ್ಥಿಗಳು ಮೊದಲು ಕುಣಿಮಗ್ಗದ ಬಗ್ಗೆ ಮಾಹಿತಿ ತಿಳಿದುಕೊಳ್ಳಬೇಕು. ಬೆಟಗೇರಿಯ ನೇಕಾರರ ಕೈಮಗ್ಗದ ಉತ್ಪಾದಾನೆಗಳು ಸಂಪೂರ್ಣವಾಗಿ ವಿದೇಶಕ್ಕೆ ರಫ್ತಾಗುತ್ತಿದ್ದವು. ಕಾರಣಾಂತರಗಳಿಂದ ಕೈಮಗ್ಗದಲ್ಲಿ ಆದಾಯ ಕುಸಿದು, ಕೈಮಗ್ಗ ನಿಂತು 25 ಸಾವಿರಗಳಿದ್ದ ಕೈಮಗ್ಗಗಳು ಕೇವಲ 3 ಸಾವಿರಕ್ಕೆ ಇಳಿದಿದೆ. ಹೀಗೆ ಮುಂದುವರೆದರೆ ಕೈಮಗ್ಗ ಉಳಿಯುವುದು ಕಷ್ಟಕರ ಎಂದು ಆತಂಕ ವ್ಯಕ್ತಪಡಿಸಿದರು.

ಕೈಮಗ್ಗದಲ್ಲಿ ಉತ್ಪಾದನೆ ಮಾಡಿದ ಬಟ್ಟೆಯ ಹಾಗೆ ಬೇರೆ ಯಾವುದೇ ಯಂತ್ರಗಳಿಂದ ತಯಾರಿಸಿದರೆ ಉತ್ತಮ ಗುಣಮಟ್ಟ ಇರುವುದಿಲ್ಲ. ಅತಿದೊಡ್ಡ ಉದ್ಯೋಗ ನೀಡುವ ಕೈಮಗ್ಗ ಕ್ಷೇತ್ರ ಎಲ್ಲರ ನಿರ್ಲಕ್ಷ್ಯದಿಂದ ಅಂತಿಮ ಹಂತದ ಅಂಚಿಗೆ ಬಂದು ತಲುಪಿದೆ. ಕೈಮಗ್ಗ ಸಂಸ್ಥೆಯ ತರಬೇತಿಗಾರರಿಗೆ ಮತ್ತು ಬೋಧಕ ವರ್ಗದವರಿಗೆ ಕೈಮಗ್ಗ ಉಳಿಸುವುದು ಸವಾಲಾಗಿದೆ ಎಂದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, 1905ರಲ್ಲಿ ಆರಂಭವಾದ ಸ್ವದೇಶಿ ಚಳುವಳಿಯ ನೂರನೇ ವಾರ್ಷಿಕೋತ್ಸವದ ಅಂಗವಾಗಿ ಭಾರತ ಸರ್ಕಾರವು ರಾಷ್ಟ್ರೀಯ ಕೈಮಗ್ಗ ದಿನವನ್ನು ಆಚರಣೆ ಮಾಡಲು ನಿರ್ಧರಿಸಿತು. ಬ್ರಿಟಿಷ್ ಸರ್ಕಾರದ ಬಂಗಾಳ ವಿಭಜನೆಯ ವಿರುದ್ಧ ಪ್ರತಿಭಟನೆಗಾಗಿ ಕೊಲ್ಕತ್ತಾದ ಟೌನ್ ಹಾಲ್‌ನಲ್ಲಿ ಸ್ವದೇಶಿ ಚಳುವಳಿ ಆರಂಭವಾಯಿತು. ಈ ಚಳುವಳಿಯ ಮುಖ್ಯ ಉದ್ದೇಶ ವಿದೇಶಿ ವಸ್ತುಗಳನ್ನು ಬಹಿಷ್ಕರಿಸಿ, ಸ್ವದೇಶಿ ಉತ್ಪನ್ನಗಳನ್ನು ಉತ್ತೇಜಿಸುವುದಾಗಿತ್ತು. ಸ್ವದೇಶಿ ಚಳುವಳಿಯ ಸವಿನೆನಪಿಗಾಗಿ ಕೈಮಗ್ಗ ದಿನಾಚರಣೆ ಆಚರಣೆ ಮಾಡಲಾಯಿತು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಿ, ಕೈಮಗ್ಗ ನೇಕಾರರಿಗೆ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕೈಮಗ್ಗ ಸಲಹೆಗಾರರಾದ ವೃಂದ ಶೇಖರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ನಗರಸಭೆ ಸದಸ್ಯೆ ಶಕುಂತಲಾ ಅಕ್ಕಿ, ಕೈಗಾರಿಕಾ ನೇಕಾರ ಸಂಘದ ಅಧ್ಯಕ್ಷ ಅಶೋಕ ಬಣ್ಣದ, ಜಿಲ್ಲಾ ಜವಳಿ ಉತ್ಪಾದಕರ ಸಂಘದ ಅಧ್ಯಕ್ಷ ಅನಿಲ್ ಗಡ್ಡಿ, ಕೆ.ಎಸ್.ಟಿ.ಐ.ಡಿ.ಸಿ.ಎಲ್ ಮಾಜಿ ನಿರ್ದೇಶಕ ಶಿವಕುಮಾರ ಪಾಟೀಲ್, ಮಲ್ಲಿಕಾರ್ಜುನ ಬೆಲ್ಲದ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಸೇರಿದಂತೆ ಇತರರು ಹಾಜರಿದ್ದರು.

# ವಿದ್ಯಾರ್ಥಿಗಳ ಭವಿಷ್ಯಕ್ಕೆ ಶಿಷ್ಯವೇತನ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಶಿಷ್ಯವೇತನವನ್ನು ನೀಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದು ಜಿಲ್ಲಾ ಜನಜಾಗೃತಿ ವೇದಿಕೆ ನಿಕಟಪೂರ್ವ ಅಧ್ಯಕ್ಷ ಶಿವಪ್ರಕಾಶ ಮಹಾಜನಶೆಟ್ಟರ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕುಗಳ ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯವೇತನ ಮತ್ತು ಆರೋಗ್ಯ ರಕ್ಷಾ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ವಿತರಿಸಿ ಮಾತನಾಡಿದರು.

ಸಂಸ್ಥೆಯು ಸಮಾಜದಲ್ಲಿ ಸ್ವಾಸ್ಥ್ಯವನ್ನು ಕಾಪಾಡುವುದಕ್ಕಾಗಿ ಮದ್ಯವರ್ಜನ ಶಿಬಿರ, ರೈತರ ಶ್ರೇಯೋಭಿವೃದ್ಧಿಗೆ ವಿಚಾರ ಸಂಕೀರ್ಣಗಳು, ಕಾರ್ಯಾಗಾರಗಳು, ವಯೋವೃದ್ಧರಿಗೆ ಮಾಸಾಶನ, ಸ್ವಸಹಾಯ ಸಂಘಗಳ ಮೂಲಕ ಮಹಿಳೆಯರಿಗೆ ಆರ್ಥಿಕ ಸಹಾಯ, ಗ್ರಾಮೀಣ ಪ್ರದೇಶಗಳ ಜನತೆಗೆ ಅನುಕೂಲವಾಗಲು ಸಿಎಸ್‌ಸಿ ಸೆಂಟರ್‌ಗಳ ಸ್ಥಾಪನೆ ಹೀಗೆ ಹತ್ತು ಹಲವು ಸಮಾಜಮುಖಿ ಕಾರ್ಯಗಳು ಡಾ. ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ರಾಜ್ಯಾದ್ಯಂತ ನಡೆಯುತ್ತಿವೆ. ಸಂಸ್ಥೆಯ ವತಿಯಿಂದ ಸಹಾಯ ಸೌಲಭ್ಯಗಳನ್ನು ಪಡೆದುಕೊಂಡ ಕುಟುಂಬಗಳು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಹೇಳಿದರು.

ತಾಲೂಕಾ ಕ್ಷೇತ್ರ ಯೋಜನಾಧಿಕಾರಿ ಪುನೀತ್ ಓಲೇಕಾರ ಮಾತನಾಡಿ, ಸಂಸ್ಥೆಯ ವ್ಯಾಪ್ತಿಯಲ್ಲಿ ವೃತ್ತಿಪರ ಕೋರ್ಸ್‌ಗಳನ್ನು ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು 10 ಲಕ್ಷ 62ಸಾವಿರ ರೂ.ಗನ್ನು ಸಂಸ್ಥೆಯು ನೀಡುತ್ತಿದೆ. ಪ್ರಸಕ್ತ ವರ್ಷ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳ ಮಕ್ಕಳಿಗೆ ಪುಸ್ತಕ, ಬ್ಯಾಗ್ ಹಾಗೂ ಸಮವಸ್ತ್ರಗಳನ್ನು ವಿತರಿಸಲಾಗಿದೆ. ಶಿಷ್ಯವೇತನ ಪಡೆದುಕೊಂಡ ಎಲ್ಲ ವಿದ್ಯಾರ್ಥಿಗಳು ಇದನ್ನು ಸದುಪಯೋಗಪಡಿಸಿಕೊಂಡು ತಮ್ಮ ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಬೇಕೆಂದು ಹೇಳಿದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಕಾರ್ಯಕ್ರಮ ಉದ್ಘಾಟಿಸಿದರು. ಸಂಸ್ಥೆಯ ಜಿಲ್ಲಾ ನಿರ್ದೇಶಕ ಯೋಗೀಶ ಎ, ಮಹಾಂತೇಶ ದಶಮನಿ ಹಾಗೂ ಸಂಸ್ಥೆಯ ಮೇಲ್ವಿಚಾರಕರು ಉಪಸ್ಥಿತರಿದ್ದರು.

**ಮಹರ್ಷಿ ಶ್ರೀ ವಾಲ್ಮೀಕಿ ಭವನ ಉದ್ಘಾಟನಾ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ**

# ಕಾಂಗ್ರೆಸ್‌ನಿಂದ ಸಾಮಾಜಿಕ ನ್ಯಾಯದ ಪರಿಕಲ್ಪನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಾಮಾಜಿಕ ನ್ಯಾಯದಡಿಯಲ್ಲಿ ಗೃಹಲಕ್ಷ್ಮೀ, ಅನ್ನಭಾಗ್ಯ, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿಯಂತಹ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಷ್ಟ್ರದಲ್ಲೇ ಕ್ರಾಂತಿಕಾರಿ ಕಾರ್ಯಕ್ರಮಗಳನ್ನು ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ರಾಜ್ಯದ ಜನತೆಗೆ ನೀಡಿದೆ ಎಂದು ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಬುಧವಾರ ಶಿರಹಟ್ಟಿ ಪಟ್ಟಣದಲ್ಲಿ ತಾಲೂಕಾ ಆಡಳಿತ, ತಾ.ಪಂ, ಸಮಾಜ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಹರ್ಷಿ ಶ್ರೀ ವಾಲ್ಮೀಕಿ ಭವನದ ನೂತನ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಬಡತನ ರೇಖೆಯಲ್ಲಿರುವ ರಾಜ್ಯದ 1.10 ಕೋಟಿ ಕುಟುಂಬಗಳಿಗೆ ಪ್ರತಿ ತಿಂಗಳು 5 ಸಾವಿರ ತಲುಪಿಸುವುದರೊಂದಿಗೆ ಇವರುಗಳನ್ನು ಮೇಲುಸ್ತರಕ್ಕೆ ತರುವ ಕಾರ್ಯ, ಸಾಮಾಜಿಕ ನ್ಯಾಯದ ಸಂಪೂರ್ಣ ಪರಿಕಲ್ಪನೆಯನ್ನು ಸಿಎಂ ಸಿದ್ದರಾಮಯ್ಯ ಅವರು ಮಾಡುತ್ತಿದ್ದಾರೆ. ಇಂದು ಲೋಕಾರ್ಪಣೆಯಾದ ಮಹರ್ಷಿ ವಾಲ್ಮೀಕಿ ಭವನದಲ್ಲಿ ವರ್ಷಕ್ಕೆ ಕನಿಷ್ಠ 5 ಕಾರ್ಯಕ್ರಮಗಳನ್ನಾದರೂ ಮಾಡಬೇಕು ಎಂದರು.



ಜಿಲ್ಲೆಯ ಶ್ರದ್ಧಾಕೇಂದ್ರ, ಸರ್ವಧರ್ಮವನ್ನು ಸಮಾನವಾಗಿ ಕಂಡು ಈ ಭಾಗದಲ್ಲಿ ಸುಪ್ರಸಿದ್ಧವಾಗಿರುವ ಶಿರಹಟ್ಟಿಯ ಕರ್ತೃ ಶ್ರೀ ಜ.ಫಕೀರೇಶ್ವರ ಮಠಕ್ಕೆ ರಾಜ್ಯ ಹೆದ್ದಾರಿಯಿಂದ ರಸ್ತೆ ನಿರ್ಮಾಣದ ಅವಶ್ಯಕತೆ ಇದ್ದು, ಜಾತ್ರೆಯ ಸಂದರ್ಭದಲ್ಲಿ ಲಕ್ಷಾಂತರ ಭಕ್ತರು ಇಲ್ಲಿಗೆ ಆಗಮಿಸುತ್ತಿದ್ದಾರೆ. ಇದಕ್ಕೆ ಸಚಿವ ಸತೀಶ ಜಾರಕಿಹೊಳಿ ಅವರು ಸಾರ್ವಜನಿಕ ಘೋಷಣೆ ಮಾಡಬೇಕು, ಇದು ತಮಗೆ ದೊಡ್ಡಶಕ್ತಿ ತುಂಬಿಕೊಡುತ್ತದೆ. ಜಿಲ್ಲೆಯಲ್ಲಿ ವಿವಿಧ ಕಡೆಗಳಲ್ಲಿ ರಿಂಗ್‌ರೋಡ್ ನಿರ್ಮಾಣ ಅವಶ್ಯವಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಮಾತನಾಡಿದರು. ಸಮಾಜದ ಅಧ್ಯಕ್ಷ ಶಿವನಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಡಾ. ಚಂದ್ರು ಲಮಾಣಿ ವಹಿಸಿದ್ದರು. ಸಾನ್ನಿಧ್ಯವನ್ನು ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಪುರಿ ಸ್ವಾಮೀಜಿ, ಶಿರಹಟ್ಟಿಯ ಜ.ಫ. ದಿಂಗಾಲೇಶ್ವರ ಸ್ವಾಮೀಜಿ ವಹಿಸಿದ್ದರು.

ಮಾಜಿ ಸಂಸದ ಐ.ಜಿ. ಸನದಿ, ಟಿ.ಈಶ್ವರ, ಹುಮಾಯೂನ್ ಮಾಗಡಿ, ಆನಂದ ಗಡ್ಡದ್ದೇವರಮಠ, ಲಕ್ಷ್ಮಣಗೌಡ ಪಾಟೀಲ, ಸಣ್ಣವೀರಪ್ಪ ಹಳ್ಳೆಪ್ಪನವರ, ಶಿವಪ್ರಕಾಶ ಮಹಾಜನಶೆಟ್ಟರ, ಮಹೇಂದ್ರ ಉಡಚಣ್ಣವರ, ಬಸವರಾಜ ನಾಯ್ಕರ, ಯಲ್ಲಪ್ಪ ಬಂಗಾರಿ, ಸಮಾಜ ಕಲ್ಯಾಣ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕ ಜೆ.ವಿ. ಶಿರೋಳ, ತಹಸೀಲ್ದಾರ ಅನಿಲ ಬಡಿಗೇರ, ತಾ.ಪಂ ಇಒ ಎಸ್.ಎಸ್. ಕಲ್ಮನಿ, ಸಿಪಿಐ ನಾಗರಾಜ ಮಾಢಳ್ಳಿ, ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಸಮಾಜ ಕಲ್ಯಾಣಾಧಿಕಾರಿ ಶರಣಯ್ಯ ಹಿರೇಮಠ, ಸಹಾಯಕ ನಿರ್ದೇಶಕ ಮುತ್ತಣ್ಣ ಸಂಕನೂರ ಮುಂತಾದವರು ಉಪಸ್ಥಿತರಿದ್ದರು.

> ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಮಾತನಾಡಿ, ಕಳೆದ 14 ತಿಂಗಳುಗಳಿಂದ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ರಾಜ್ಯದ ಪ್ರಗತಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಪ್ರಸಕ್ತ ವರ್ಷದಲ್ಲಿ ಮಳೆ ಹೆಚ್ಚಾಗಿದ್ದರಿಂದ ರಸ್ತೆಗಳು ಹಾಳಾಗಿವೆ. ಸದ್ಯಕ್ಕೆ ತಾತ್ಕಾಲಿಕವಾಗಿ, ನಂತರ ಶಾಶ್ವತ ರಸ್ತೆಗಳ ನಿರ್ಮಾಣ ಮಾಡಲಾಗುವುದು. ಶಿರಹಟ್ಟಿಯ ಶ್ರೀ ಫಕೀರೇಶ್ವರ ಮಠಕ್ಕೆ ರಾಜ್ಯ ಹೆದ್ದಾರಿಯಿಂದ ರಸ್ತೆ ನಿರ್ಮಾಣದ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಕೊಳ್ಳಲಾಗುವುದು ಎಂದರು.

**ನಮ್ಮ ಕರ್ನಾಟಕ ಸೇನೆಯ ನೇತೃತ್ವದಲ್ಲಿ ಸಾರ್ವಜನಿಕರ ಪ್ರತಿಭಟನೆ**

# ರೋಡ್ ಬ್ರೇಕ್ ನಿರ್ಮಾಣಕ್ಕೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಚನ್ನಮ್ಮ ವೃತ್ತದಿಂದ ಪುರ್ತಗೇರಿ ಕ್ರಾಸ್‌ವರೆಗಿನ ರಾಷ್ಟ್ರೀಯ ಹೆದ್ದಾರಿ-637ರ ಈದ್ಗಾ ಮೈದಾನ ಸೇರಿ ಅಗತ್ಯ ಸ್ಥಳಗಳಲ್ಲಿ ರೋಡ್ ಬ್ರೇಕರ್‌ಗಳನ್ನು ನಿರ್ಮಿಸಬೇಕು ಎಂದು ಆಗ್ರಹಿಸಿ ಬುಧವಾರ ನಮ್ಮ ಕರ್ನಾಟಕ ಸೇನೆ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಪ್ರತಿಭಟನೆ ನಡೆಸಿದರು.

ಪಟ್ಟಣದಲ್ಲಿನ ಭಾನಾಪೂರ-ಗದ್ದನಕೇರಿ ರಾಷ್ಟ್ರೀಯ ಹೆದ್ದಾರಿ 367ರಲ್ಲಿ ವಾಹನಗಳ ಓಡಾಟದ ವೇಗ ಹೆಚ್ಚಾಗಿರುವ ಪರಿಣಾಮ ಅಪಘಾತಗಳ ಸಂಖ್ಯೆಯೂ ಹೆಚ್ಚಾಗುತ್ತಿದೆ. ಪರಿಣಾಮ ಪಟ್ಟಣದಲ್ಲಿನ ರಾಷ್ಟ್ರೀಯ ಹೆದ್ದಾರಿ ದಾಟುವುದು ಎಂದರೆ ಒಂದು ಕ್ಷಣ ಭಯಕ್ಕೆ ದೂಡಿದಂತಾಗುವ ಸ್ಥಿತಿ ನಿರ್ಮಾಣವಾಗಿದೆ. ಪಟ್ಟಣದ ಮುಖ್ಯ ರಸ್ತೆಯಾಗಿರುವ ಚನ್ನಮ್ಮ ವೃತ್ತದಿಂದ ಹಿಡಿದು ಪುರ್ತಗೇರಿ ಕ್ರಾಸ್‌ವರೆಗೆ ಇರುವ ಶಾಲಾ-ಕಾಲೇಜುಗಳ ನೂರಾರು ವಿದ್ಯಾರ್ಥಿಗಳು ಈ ಮಾರ್ಗವಾಗಿ ಸಂಚರಿಸಬೇಕಿದ್ದು, ಎಚ್ಚರಿಕೆ ತಪ್ಪಿದರೆ ಅಪಾಯ ಎದುರಾಗಲಿದೆ ಎಂದ ಪ್ರತಿಭಟನಾಕಾರರು, ವಿದ್ಯಾರ್ಥಿಗಳನ್ನು ಶಾಲೆಗೆ ಕಳುಹಿಸಲು ಪಾಲಕರು ಹಿಂದೇಟು ಹಾಕುತ್ತಿದ್ದು, ಅನಿವಾರ್ಯವಾಗಿ ಬೇರೆ ಶಾಲೆಗಳಿಗೆ ಕಳುಹಿಸಲು ಮುಂದಾಗುತ್ತಿದ್ದಾರೆ ಎಂದು ದೂರಿದರು.

ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದ್ದರಿಂದ ಕೆಲಕಾಲ ಸಂಚಾರಕ್ಕೆ ತೊಂದರೆಯಾಗಿತ್ತು. ಪ್ರತಿಭಟನೆ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ, ಪಿಎಸ್‌ಐ ಸೋಮನಗೌಡ ಗೌಡ್ರ, ಪುರಸಭೆಯ ಸಿ.ಡಿ. ದೊಡ್ಡಮನಿ ಪ್ರತಿಭಟನಾಕಾರರ ಅಹವಾಲು ಆಲಿಸಿದರು. ಹೆದ್ದಾರಿಯಲ್ಲಿ ರೋಡ್ ಬ್ರೇಕರ್‌ಗಳನ್ನು ನಿರ್ಮಿಸುವವರೆಗೆ ಪ್ರತಿಭಟನೆ ಹಿಂಪಡೆಯುವದಿಲ್ಲ ಎಂದು ಪಟ್ಟು ಹಿಡಿದರು. ಈ ಬಗ್ಗೆ ಅಧಿಕಾರಿಗಳು ಚರ್ಚಿಸಿ, ಹೆದ್ದಾರಿಯಲ್ಲಿ ರೋಡ್ ಬ್ರೇಕ್ ನಿರ್ಮಿಸುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರು ಪ್ರತಿಭಟನೆ ಹಿಂಪಡೆದರು.

ಈ ವೇಳೆ ಸಂಘಟನೆ ಜಿಲ್ಲಾಧ್ಯಕ್ಷ ಭೀಮಣ್ಣ ಇಂಗಳೆ, ಶಾಮೀದ ಮಾಲ್ದಾರ, ಬಾಲು ರಾಠೋಡ, ಇಮ್ರಾನ್ ಅತ್ತಾರ, ರಾಜು ಮಾಳೊತ್ತರ, ವೀರೇಶ ಶಿವಸಿಂಪಗೇರ, ಜಗದೀಶ ಮಡಿವಾಳರ, ಮೆಹಬೂಬ ಮುದಗಲ್, ತಿರುಪತಿ ಕುರಿ, ಯಮನೂರ ಗೌಡ್ರ, ಭಾಷೇಸಾಬ ಮುದಗಲ್, ಕಳಕಪ್ಪ ಹಾಳಕೇರಿ ಮುಂತಾದವರಿದ್ದರು.

# ವ್ಯಕ್ತಿ ನಾಪತ್ತೆ: ದೂರು ದಾಖಲು

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಬೆಟಗೇರಿ ಸೆಟ್ಲಮೆಂಟ್‌ನ ವ್ಯಕ್ತಿಯೊಬ್ಬರು ನಾಪತ್ತೆಯಾಗಿರುವ ಕುರಿತು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಟಗೇರಿ ಸೆಟ್ಲಮೆಂಟ್‌ನ ಆಟೋ ಡ್ರೈವರ್ ಆಗಿದ್ದ ರವಿ ಗೋವಿಂದ ಕೊರವರ(36) ಜನವರಿ 19, 2024ರಂದು ರಾತ್ರಿ 10 ಗಂಟೆಯ ಸುಮಾರಿಗೆ ದುಡಿಯಲು ಬೇರೆ ಊರಿಗೆ ಹೋಗುತ್ತೇನೆ ಎಂದು ಹೇಳಿ ತಮ್ಮ ಮನೆಯಿಂದ ಹೋದವನು, ಮರಳಿ ಮನೆಗೆ ಬಾರದೇ, ಯಾವುದೋ ಕಾರಣಕ್ಕೆ, ಎಲ್ಲಿಗೋ ಹೋಗಿ ಕಾಣೆಯಾಗಿದ್ದು, ಹುಡುಕಿಕೊಡುವಂತೆ ನಾಪತ್ತೆಯಾದವರ ಪತ್ನಿ ನೇತ್ರಾವತಿ ರವಿ ಕೊರವರ ಬೆಟಗೇರಿ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ಗುನ್ನಾ ನಂಬರ್: 46/2024ರಂತೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಕೊಂಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ: 5 ಫೂಟ್ 3 ಇಂಚು ಎತ್ತರ, ದಪ್ಪನೆಯ ಮೈಕಟ್ಟು, ದುಂಡು ಮುಖ, ಸಾದಾಗಪ್ಪು ಮೈ ಬಣ್ಣ, ಚಪ್ಪಟೆ ಮೂಗು, ಸೊಂಟದಲ್ಲಿ ಆಪರೇಷನ್ ಆದ ಗಾಯದ ಕಲೆ ಇರುತ್ತದೆ. ಬಲಗೈ ತೋಳಿನ ಮೇಲೆ ಸಿಂಹದ ಮತ್ತು ಎಡಗೈ ತೋಳಿನ ಮೇಲೆ ಚಿತ್ರ ಡಿಜೈನ್ ಇರುವ ಹಾಗೂ ಬಲ ಮುಂಗೈ ಮೇಲೆ ರಾಜೇಶ್ವರಿ ಎಂದು ಇಂಗ್ಲಿಷ್ ಅಕ್ಷರಗಳ ಹಚ್ಚೆ ಇರುತ್ತದೆ. ಕನ್ನಡ, ಹಿಂದಿ, ತೆಲುಗು ಭಾಷೆ ಮಾತನಾಡುತ್ತಾನೆ. ಇವರ ಬಗ್ಗೆ ಯಾವುದೇ ಸುಳಿವು ಸಿಕ್ಕಲ್ಲಿ ಬೆಟಗೇರಿ ಪೊಲೀಸ್ ಠಾಣೆ-08372-246333, ಪಿಎಸ್‌ಐ ಬೆಟಗೇರಿ ಪೊಲೀಸ್ ಠಾಣೆ-9480804449, ಗದಗ ಕಂಟ್ರೋಲ್ ರೂಮ್-08372-238300/9480804400 ಸಂಪರ್ಕಿಸುವಂತೆ ಕೋರಲಾಗಿದೆ.

## ಎಂಟು ಜನ ಶಸ್ತ್ರಧಾರಿಗಳ ವಿರುದ್ಧ ಹೋರಾಡಿ ತಂದೆಯನ್ನು ರಕ್ಷಿಸಿದ 17 ವರ್ಷದ ಬುಡಕಟ್ಟು ಬಾಲಕಿ

■ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ

ಛತ್ತೀಸ್‌ಗಢದ ಬಸ್ತಾರ್ ಜಿಲ್ಲೆಯ ನಾರಾಯಣಪುರದ ಹಳ್ಳಿಯೊಂದರಲ್ಲಿ 17 ವರ್ಷದ ಬುಡಕಟ್ಟು ಜನಾಂಗದ ಹುಡುಗಿಯೊಬ್ಬಳು ತನ್ನ ಶೌರ್ಯ ಪ್ರದರ್ಶಿಸಿದ್ದು, ಎಂಟು ಜನ ಶಸ್ತ್ರಸಜ್ಜಿತ ಪುರುಷರ ಗುಂಪಿನೊಂದಿಗೆ ಹೋರಾಡಿ ತನ್ನ ತಂದೆಯನ್ನು ಪ್ರಾಣಾಪಾಯದಿಂದ ರಕ್ಷಿಸಿದ್ದಾಳೆ ಎಂದು 'ಟೈಮ್ಸ್ ಆಫ್ ಇಂಡಿಯಾ' ವರದಿ ಮಾಡಿದೆ.

**ಪತ್ರಿಕಾಗೋಷ್ಠಿಯಲ್ಲಿ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜಿ.ಎ. ಬೆಲ್ಲದ ಮಾಹಿತಿ**

# ಬಣಜಿಗ ಸಂಘದ ವಾರ್ಷಿಕೋತ್ಸವ ಆ. 11ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್

ನರೇಗಲ್ ಬಣಜಿಗ ಸಂಘದ 11ನೇ ವಾರ್ಷಿಕೋತ್ಸವ ಹಾಗೂ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಆಗಸ್ಟ್ 11ರಂದು ಬೆಳಿಗ್ಗೆ 10.30ಕ್ಕೆ ರೋಟರಿ ಕ್ಲಬ್ ಭವನದಲ್ಲಿ ಜರುಗಲಿದೆ ಎಂದು ಸಂಘದ ಅಧ್ಯಕ್ಷ ಜಿ.ಎ. ಬೆಲ್ಲದ ಹೇಳಿದರು.

ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಬಣಜಿಗ ಸಂಘಕ್ಕೆ ನೂರು ವರ್ಷಗಳ ಇತಿಹಾಸವಿದೆ. ಆಗ ಸಂಘವು ಶುಭ-ಅಶುಭ ಕಾರ್ಯಗಳಿಗೆ ಬಾಂಡೆ ಸಾಮಾನುಗಳನ್ನು ಬಾಡಿಗೆ ನೀಡುವದಕ್ಕೆ ಸೀಮಿತವಾಗಿತ್ತು. ಆದರೆ 11 ವರ್ಷಗಳ ಹಿಂದೆ ಈ ಸಂಘಕ್ಕೆ ಬಣಜಿಗ ಕ್ಷೇಮಾಭಿವೃದ್ಧಿ ಸಂಘ ಎಂದು ನೂತನ ಹೆಸರನ್ನು ನೀಡಿ ಅಂದಿನಿಂದ ವಾರ್ಷಿಕೋತ್ಸವವನ್ನು ಆಚರಿಸುತ್ತ ಬರಲಾಗಿದೆ ಎಂದು ಅವರು ತಿಳಿಸಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಶಿವಯೋಗಿ ಜಕ್ಕಲಿ ಮಾತನಾಡಿ, 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ಪ್ರತಿಭಾವಂತ ಮೂವರು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಿದ್ದು, ಸನ್ಮಾನದೊಂದಿಗೆ ನಗದು ಪುರಸ್ಕಾರವನ್ನು ನೀಡಲಾಗುವುದು. ಹಂಚಿನಾಳ ರಸ್ತೆಯಲ್ಲಿ 1 ಎಕರೆ ಭೂಮಿಯನ್ನು ಸಮಾಜದ ವತಿಯಿಂದ ಖರೀದಿಸಿ ಅಲ್ಲಿ ಒಂದು ಕಲ್ಯಾಣ ಮಂಟಪವನ್ನು ನಿರ್ಮಿಸಿ ಸಮಾಜದ ಜನತೆಯ ಉಪಯೋಗಕ್ಕೆ ನೀಡುವ ವಿಚಾರವಿದೆ. ಇದೇ ಸಂದರ್ಭದಲ್ಲಿ ಸೇವೆಯಿಂದ ನಿವೃತ್ತರಾದವರಿಗೆ ಸನ್ಮಾನ ಸಮಾರಂಭವೂ ಜರುಗಲಿದೆಯೆಂದು ತಿಳಿಸಿದರು.



ಈಗ ಶ್ರಾವಣ ಮಾಸ ಇರುವದರಿಂದ ಕಾರ್ಯಕ್ರಮಕ್ಕೆ ಆಗಮಿಸುವ ಸಮಾಜದ ಸುಮಾರು 300 ಜನ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮವನ್ನು ಇದೇ ಸಂದರ್ಭದಲ್ಲಿ ನಮ್ಮ ಮಹಿಳಾ ಘಟಕದಿಂದ ಏರ್ಪಡಿಸಲಾಗಿದೆ ಎಂದೂ ತಿಳಿಸಿದರು.

ಸಮಾಜದ ಧುರೀಣ ಶರಣಪ್ಪ ಹಂಜಿ ಮಾತನಾಡಿ, ಈ ಭೂಮಿ ಖರೀದಿಗಾಗಿ ಈಗಾಗಲೇ ಧನ ಸಂಗ್ರಹಣೆ ಪ್ರಾರಂಭವಾಗಿದ್ದು, ಅನೇಕ ದಾನಿಗಳು ಧನ ಸಹಾಯ ಮಾಡಲು ಮುಂದೆ ಬಂದಿದ್ದಾರೆ. ಈಗಾಗಲೇ 22 ಜನ ದಾನಿಗಳು 10 ಸಾವಿರಕ್ಕೂ ಮೇಲ್ಪಟ್ಟು ಹಣವನ್ನು ನೀಡಿದ್ದು, ಅವರನ್ನು ಈ ಸಮಾರಂಭದಲ್ಲಿ ಸನ್ಮಾನಿಸುವ ಕಾರ್ಯಕ್ರಮವಿದೆ. ಇನ್ನೂ ಅನೇಕರು ದಾನ ನೀಡುವ ವಾಗ್ದಾನ ಮಾಡಿದ್ದಾರೆ. ಈ ಕಾರ್ಯಕ್ರಮದಲ್ಲಿ ನೆರೆಯ ಗ್ರಾಮಗಳಾದ ಗದಗ, ಗಜೇಂದ್ರಗಡ, ರೋಣ, ಜಕ್ಕಲಿ, ನಿಡಗುಂದಿಕೊಪ್ಪ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಮಾಜ ಬಾಂಧವರು ಭಾಗವಹಿಸುತ್ತಿದ್ದು, ಸುಮಾರು 500 ಜನ ಸಮಾರಂಭದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮಾಜದ ಮುಖಂಡರಾದ ಸಂಗಮೇಶ ಮೆಣಸಗಿ, ಗವಿಸಿದ್ದಪ್ಪ ಗೊಡಚಪ್ಪನವರ ಇನ್ನೂ ಮುಂತಾದವರು ಪಾಲ್ಗೊಂಡಿದ್ದರು.

> 11ನೇ ವಾರ್ಷಿಕೋತ್ಸವವನ್ನು ಗದಗ ಜಿಲ್ಲಾ ಬಣಜಿಗ ಸಂಘದ ಅಧ್ಯಕ್ಷ ಈಶಣ್ಣ ಮುನವಳ್ಳಿ ಉದ್ಘಾಟಿಸಲಿದ್ದಾರೆ. ನಿವೃತ್ತ ಪ್ರಾಧ್ಯಾಪಕ ಡಾ. ಎ.ಕೆ. ನಾಶಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಗದಗ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕಿ ಡಾ. ಗಿರಿಜಾ ಹಸಬಿ ಉಪನ್ಯಾಸ ನೀಡಲಿದ್ದಾರೆ. ಸಮಾಜದ ಹಿರಿಯರಾದ ಸಿ.ವಿ. ವಂಕಲಕುಂಟಿ, ರೋಣ ಅಧ್ಯಕ್ಷ ಮುತ್ತಣ್ಣ ಸಂಗಳದ, ಗದಗ ತಾಲೂಕಾ ಅಧ್ಯಕ್ಷ ನಾಗೇಶ ಸವಡಿ, ಗಜೇಂದ್ರಗಡ ಅಧ್ಯಕ್ಷ ಎಸ್. ಎಸ್. ವಾಲಿ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಜಿ.ಎ. ಬೆಲ್ಲದ ಮಾಹಿತಿ ನೀಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka